ಸಂಪುಟ: 11 ಸಂಚಿಕೆ: 149 ಪುಟ: 4+2 ಬೆಲೆ : 3.00 ಗುರುವಾರ ಜುಲೈ 16, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 149 Pages : 4+2 Rate : 3.00 Thursday July 16, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ನರಸಾಪೂರದಲ್ಲಿ ಭೂಸ್ವಾಧೀನ ವಿರೋಧಿಸಿ ಬೃಹತ್ ಪ್ರತಿಭಟನೆ | ನಿಯಮ ಮೀರಿ ಪೈಪ್‌ಲೈನ್ ಅಳವಡಿಕೆ

# ಫಲವತ್ತಾದ ಭೂಮಿ ಉಳಿಸಲು ನಾಳೆ ರೈತರ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ನರಸಾಪೂರ ಸರಹದ್ದಿನಲ್ಲಿ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯನ್ನು ಕೈಬಿಡಬೇಕು ಹಾಗೂ ಹನಿ ನೀರಾವರಿ ಯೋಜನೆ ಹೆಸರಿನಲ್ಲಿ ರಾಜ್ಯ ಹೆದ್ದಾರಿಯಲ್ಲಿ ಕಾನೂನುಬಾಹಿರವಾಗಿ ಪೈಪ್‌ಲೈನ್ ಅಳವಡಿಸುತ್ತಿರುವುದನ್ನು ವಿರೋಧಿಸಿ ಜುಲೈ 17ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಎಚ್. ಶಿವರಾಮೇಗೌಡ ಬಣ) ಜಿಲ್ಲಾಧ್ಯಕ್ಷ ಎಂ.ಪಿ. ಪರ್ವತಗೌಡ್ರ, ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಟಗೇರಿ ಹೊರವಲಯದ ನಾಗಸಮುದ್ರ ಗ್ರಾಮದ ದಂಡಿನ ದುರ್ಗಾದೇವಿ ದೇವಸ್ಥಾನದ ಸಮೀಪ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ (ಎಚ್. ಶಿವರಾಮೇಗೌಡ ಬಣ) ನೇತೃತ್ವದಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ಹೇಳಿದರು.



ಈಗಾಗಲೇ ನರಸಾಪೂರ ವ್ಯಾಪ್ತಿಯಲ್ಲಿ 160ಕ್ಕೂ ಹೆಚ್ಚು ಎಕರೆ ಭೂಮಿಯನ್ನು ಕೆಐಎಡಿಬಿ ಸ್ವಾಧೀನಪಡಿಸಿಕೊಂಡು ಕೈಗಾರಿಕೆ ಸ್ಥಾಪಿಸಿದೆ. ಇದೀಗ ಮತ್ತೆ 220 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ರೈತರಿಗೆ ನೋಟಿಸ್ ನೀಡಲಾಗಿದೆ. ಇದರಿಂದ ರೈತರ ಬದುಕು ಹಾಗೂ ಪರಿಸರದ ಮೇಲೆ ಗಂಭೀರ ಪರಿಣಾಮ ಉಂಟಾಗಲಿದ್ದು, ಸರ್ಕಾರ ತಕ್ಷಣವೇ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಬೇಕು. ಇಲ್ಲವಾದರೆ ಹೋರಾಟವನ್ನು ಮತ್ತಷ್ಟು ಉಗ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾಧ್ಯಕ್ಷ ವಿಜಯಕುಮಾರ ಸುಂಕದ ಮಾತನಾಡಿ, ಹನಿ ನೀರಾವರಿ ಕಾಮಗಾರಿಯ ಗುತ್ತಿಗೆದಾರರು ರಾಜ್ಯ ಹೆದ್ದಾರಿ ನಿಯಮಗಳನ್ನು ಉಲ್ಲಂಘಿಸಿ ಕಾಮಗಾರಿ ನಡೆಸುತ್ತಿದ್ದಾರೆ. ರಾಜ್ಯ ಹೆದ್ದಾರಿಯಿಂದ 40 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ಕಾಮಗಾರಿ ನಡೆಸಬಾರದು ಎಂಬ ನಿಯಮವಿದ್ದರೂ ಪೈಪ್‌ಲೈನ್ ಅಳವಡಿಸಲಾಗುತ್ತಿದೆ. ಇದಕ್ಕೆ ಲೋಕೋಪಯೋಗಿ ಇಲಾಖೆ ಅನುಮತಿ ನೀಡಿರುವುದು ಸರಿಯಾದ ಕ್ರಮವಲ್ಲ ಎಂದು ಆರೋಪಿಸಿದರು.

ನಾಗಸಮುದ್ರದ ಐತಿಹಾಸಿಕ ದಂಡಿನ ದುರ್ಗಾದೇವಿ ದೇವಸ್ಥಾನದ 150ಕ್ಕೂ ಹೆಚ್ಚು ವರ್ಷಗಳಷ್ಟು ಹಳೆಯ ಬೇವಿನ ಮರದ ಸಮೀಪ ಆಳವಾಗಿ ಗುಂಡಿ ತೋಡಿರುವುದರಿಂದ ಮರಕ್ಕೆ ಅಪಾಯ ಎದುರಾಗಿದ್ದು, ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

> **ರೈತರ ಫಲವತ್ತಾದ ಭೂಮಿಯನ್ನು ಯಾವುದೇ ಕಾರಣಕ್ಕೂ ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳಲು ಅವಕಾಶ ನೀಡುವುದಿಲ್ಲ. ರೈತರ ಬದುಕು ಉಳಿಸಲು ಅಗತ್ಯವಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುತ್ತೇವೆ.**
> – **ಎಂ.ಪಿ. ಪರ್ವತಗೌಡ್ರ**, ಜಿಲ್ಲಾಧ್ಯಕ್ಷ, ಕರ್ನಾಟಕ ರಕ್ಷಣಾ ವೇದಿಕೆ (ಎಚ್. ಶಿವರಾಮೇಗೌಡ ಬಣ)

ಪತ್ರಿಕಾಗೋಷ್ಠಿಯಲ್ಲಿ ರಾಜು ಬಾಳಿಕಾಯಿ, ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯ ಸಂಘಟನಾ ಕಾರ್ಯದರ್ಶಿ ಬಸಯ್ಯ ಗುಡ್ಡಿಮಠ, ಬಸವರಾಜ ಮುಳ್ಳಾಳ, ಬಸವರಾಜ ಹೊನ್ನಪ್ಪನವರ, ಮಂಜುನಾಥ ಹೊನ್ನಪ್ಪನವರ, ಅಪ್ಪಣ್ಣ ಕಾಳೆ, ಸುರೇಶ ಪೂಜಾರ, ಸುರೇಶ ನಿಂಗಪ್ಪ ಪೂಜಾರ, ಕೆಂಪಣ್ಣ ಪೂಜಾರ, ಪರಶುರಾಮ ಗಾಯಕವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಗೃಹ ಸಚಿವ ಖರ್ಗೆ ವಿರುದ್ಧ ಗೋವಿಂದಗೌಡ್ರ ವಾಗ್ದಾಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕಲಬುರಗಿ ಕೇಂದ್ರ ಕಾರಾಗೃಹದಿಂದ ಮೂವರು ಕೈದಿಗಳು ಪರಾರಿಯಾದ ಪ್ರಕರಣಕ್ಕೆ ಗೃಹ ಸಚಿವ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಆಗ್ರಹಿಸಿದ್ದಾರೆ. ಪತ್ರಿಕಾ ಪ್ರಕಟಣೆಯಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಗೃಹ ಇಲಾಖೆಯ ವ್ಯಾಪ್ತಿಯಲ್ಲೇ ಇಂತಹ ಗಂಭೀರ ಭದ್ರತಾ ವೈಫಲ್ಯ ಸಂಭವಿಸಿರುವುದು ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿದೆ. ಕಲಬುರಗಿ ಜಿಲ್ಲೆಯ ಉಸ್ತುವಾರಿ ಸಚಿವರಾಗಿರುವ ಪ್ರಿಯಾಂಕ್ ಖರ್ಗೆ ಅವರು ಈ ಘಟನೆಯ ನೈತಿಕ ಹೊಣೆ ಹೊರುವ ಸಮಯ ಬಂದಿದೆ ಎಂದು ಹೇಳಿದರು. ಇತ್ತೀಚೆಗೆ ಅಯೋಧ್ಯೆ ರಾಮಮಂದಿರದ ದೇಣಿಗೆ ಪ್ರಕರಣದಲ್ಲಿ ಪ್ರಧಾನಿ, ಕೇಂದ್ರ ಗೃಹ ಸಚಿವರು ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದ ಪ್ರಿಯಾಂಕ್ ಖರ್ಗೆ, ಇದೀಗ ತಮ್ಮ ಇಲಾಖೆಯಲ್ಲೇ ನಡೆದ ಗಂಭೀರ ಘಟನೆ ಕುರಿತು ಮೌನ ವಹಿಸಿರುವುದು ಅವರ ನಿಲುವಿನ ದ್ವಂದ್ವವನ್ನು ತೋರಿಸುತ್ತದೆ ಎಂದು ಟೀಕಿಸಿದರು. ಸಾಕಷ್ಟು ಭದ್ರತೆ ಇರುವ ಕಾರಾಗೃಹದಿಂದ ಮೂವರು ಕೈದಿಗಳು ಪರಾರಿಯಾಗಿರುವುದು ಸಾಮಾನ್ಯ ಘಟನೆಯಲ್ಲ. ಇದು ಗೃಹ ಇಲಾಖೆಯ ಕಾರ್ಯವೈಖರಿಗೆ ಕಪ್ಪುಚುಕ್ಕೆ ಆಗಿದ್ದು, ಪ್ರಿಯಾಂಕ್ ಖರ್ಗೆ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಇಲ್ಲವಾದರೆ ಇತರರಿಗೆ ನೈತಿಕತೆಯ ಪಾಠ ಹೇಳುವುದನ್ನು ನಿಲ್ಲಿಸಬೇಕು ಎಂದು ವೆಂಕನಗೌಡ ಆರ್. ಗೋವಿಂದಗೌಡ್ರ ಒತ್ತಾಯಿಸಿದ್ದಾರೆ.

---

## ಜಿಲ್ಲೆಯಲ್ಲಿ ಶೇ.99.96ರಷ್ಟು ಎನ್ಯುಮರೇಷನ್ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯ ಜಿಲ್ಲೆಯಲ್ಲಿ ವೇಗವಾಗಿ ಸಾಗುತ್ತಿದ್ದು, ಜುಲೈ 14ರ ವೇಳೆಗೆ 9,02,629 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಓ.) ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ. ಈ ಕಾರ್ಯ ಜುಲೈ 29ರವರೆಗೆ ಮುಂದುವರಿಯಲಿದೆ. ಇದುವರೆಗೆ 3,95,478 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಉಳಿದ ಫಾರ್ಮ್‌ಗಳ ಡಿಜಿಟಲೀಕರಣ ಕಾರ್ಯವೂ ಪ್ರಗತಿಯಲ್ಲಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

---

## ಸರ್ಕಾರಿ ಪದವಿ ಕಾಲೇಜಿಗೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ ಸ್ಥಾಪಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ಬುಧವಾರ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಧನಂಜಯ ಎಂ. ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಪಟ್ಟಣದ ಹೊಸ ಬಸ್ ನಿಲ್ದಾಣದ ಎದುರು ರಾಜ್ಯ ಹೆದ್ದಾರಿಯನ್ನು ತಡೆದ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಕೆಲಕಾಲ ರಸ್ತೆ ತಡೆ ನಡೆಸಿದರು. ಬಳಿಕ ಸರ್ಕಾರಿ ಪದವಿ ಕಾಲೇಜು ಆರಂಭಿಸುವಂತೆ ಒತ್ತಾಯಿಸಿದರು. ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಎಬಿವಿಪಿ ಗದಗ ಜಿಲ್ಲಾ ಸಂಚಾಲಕ ಅಭಿಷೇಕ ಉಮಚಗಿ, ಸಾವಿರಾರು ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿ ಗಳು ಪದವಿ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಖಾಸಗಿ ಕಾಲೇಜುಗಳ ಶುಲ್ಕ ಭರಿಸಲು ಸಾಧ್ಯವಾಗದ ಅನೇಕ ವಿದ್ಯಾರ್ಥಿಗಳು ಪಿಯುಸಿ ಬಳಿಕ ಶಿಕ್ಷಣ ಮೊಟಕುಗೊಳಿಸು ತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಎಬಿವಿಪಿ ಕಾರ್ಯಕರ್ತೆ ಅನು ಅಣ್ಣಿಗೇರಿ ಮಾತನಾಡಿದರು. ಪ್ರತಿಭಟನೆಯಲ್ಲಿ ವಿನಾಯಕ ಕುಂಬಾರ, ಸಾಗರ ಮೆಹರವಾಡೆ, ಪ್ರೀತಂ ರಾಜೋಳಿ, ವಿನಯ ಸಪಡ್ಲ್, ರತ್ನಾ ಕಮತದ, ಸವಿತಾ ಕರೆಯತ್ತಿನ, ಚೈತ್ರಾ ಕೊರಕೇರಿ, ತೇಜಸ್ವಿನಿ ಅರಳಿ, ಭಾಗ್ಯ ವಡವಿ, ಅಪೇಕ್ಷಾ ಶೇರಸೂರಿ, ಅಪೂರ್ವ ಹವಳದ, ಜ್ಯೋತಿ ಬಾಡಗಿ, ರಮ್ಯಾ ಮಹೇಂದ್ರಕರ, ರಾಜೇಶ್ವರಿ ಪಟ್ಟೇದ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

---

ವಿಗ್ರಹ ವಿರೂಪ ಪ್ರಕರಣಗಳಿಗೆ ಕಡಿವಾಣ ಹಾಕಿ, ತಪ್ಪಿತಸ್ಥರನ್ನು ಬಂಧಿಸುವಂತೆ ಹಿಂದೂ ಸಂಘಟನೆಗಳ ಆಗ್ರಹ

## ಪ್ರಾಚೀನ ದೇವಾಲಯದ ಮೂರ್ತಿಗಳಿಗೆ ಭದ್ರತೆ ಕಲ್ಪಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಹಿಂದೂ ದೇವಾಲಯಗಳ ವಿಗ್ರಹಗಳು ಹಾಗೂ ಮಹಾತ್ಮರ ಪ್ರತಿಮೆಗಳನ್ನು ಪದೇ ಪದೇ ವಿರೂಪಗೊಳಿಸಲಾಗುತ್ತಿದ್ದು, ದುಷ್ಕರ್ಮಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಹಿಂದೂ ಸಂಘಟನೆಗಳ ಮುಖಂಡ ರಾಜೂ ಖಾನಪ್ಪನವರ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಬುಧವಾರ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ರಾಜೂ ಖಾನಪ್ಪನವರ, ಜಿಲ್ಲೆಯಲ್ಲಿ ದೇವರ ಮೂರ್ತಿಗಳು ಹಾಗೂ ಮಹಾತ್ಮರ ಪ್ರತಿಮೆಗಳ ಮೇಲೆ ನಿರಂತರವಾಗಿ ದಾಳಿ ನಡೆಯುತ್ತಿದ್ದರೂ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಸಮರ್ಪಕ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ಗದಗದ ಐತಿಹಾಸಿಕ ತ್ರಿಕೂಟೇಶ್ವರ ದೇವಸ್ಥಾನದ ಆವರಣದಲ್ಲಿರುವ ಕೇಂದ್ರ ಪ್ರಾಚ್ಯವಸ್ತು ಇಲಾಖೆಯ ಸುಪರ್ದಿಯಲ್ಲಿನ ಅಪರೂಪದ ಸರಸ್ವತಿ ದೇವಿಯ ಮೂರ್ತಿಯನ್ನು ಮತ್ತೆ ವಿರೂಪಗೊಳಿಸಿರುವುದು ಅತ್ಯಂತ ಖಂಡನೀಯ.

ಈ ಮೂರ್ತಿಯ ಮೇಲೆ ಕಳೆದ ಮೂರು ವರ್ಷಗಳಲ್ಲಿ ಹಲವು ಬಾರಿ ದಾಳಿ ನಡೆದಿದ್ದರೂ ಆರೋಪಿಗಳನ್ನು ಪತ್ತೆಹಚ್ಚುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಯಾರಾದರೂ ದೂರು ನೀಡಿದರೆ ಮಾತ್ರ ಪ್ರಕರಣ ದಾಖಲಿಸುತ್ತೇವೆ ಎಂಬ ಪೊಲೀಸ್ ಇಲಾಖೆಯ ನಿಲುವು ಸರಿಯಲ್ಲ. ರಾಷ್ಟ್ರೀಯ ಮಹತ್ವದ ಸ್ಮಾರಕಗಳು ಮತ್ತು ಪ್ರಾಚೀನ ದೇವಾಲಯಗಳಲ್ಲಿ ಇಂತಹ ಘಟನೆಗಳು ನಡೆದಾಗ ಪೊಲೀಸ್ ಇಲಾಖೆ ಸ್ವಯಂಪ್ರೇರಿತವಾಗಿ



ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಲಕ್ಕುಂಡಿಯಲ್ಲೂ ಪ್ರಾಚೀನ ಶಿಲ್ಪಗಳು ಹಾನಿಗೊಳಗಾಗಿದ್ದು, ಹರ್ತಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿರುವ ಮಹಾತ್ಮ ಗಾಂಧೀಜಿ ಹಾಗೂ ದಾನಿ ಸೋಮಶೇಖರಯ್ಯ ಹುಚ್ಚಯ್ಯ ಗಣಾಚಾರಿ ಅವರ ಪ್ರತಿಮೆಗಳನ್ನೂ ದುಷ್ಕರ್ಮಿಗಳು ವಿರೂಪಗೊಳಿಸಿದ್ದಾರೆ. ಘಟನೆ ನಡೆದ ಹಲವು ದಿನಗಳಾದರೂ ಸಂಬಂಧಪಟ್ಟ ಅಧಿಕಾರಿಗಳು ದೂರು ದಾಖಲಿಸದಿರುವುದು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಜಿಲ್ಲೆಯ ಐತಿಹಾಸಿಕ ದೇವಾಲಯಗಳು, ಶಿಲ್ಪಕಲೆ ಹಾಗೂ ಮಹನೀಯರ ಪ್ರತಿಮೆಗಳು ಮುಂದಿನ ಪೀಳಿಗೆಗೆ ಉಳಿಯಬೇಕಾದರೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಅವುಗಳ ರಕ್ಷಣೆಗೆ ಶಾಶ್ವತ ಕ್ರಮ ಕೈಗೊಳ್ಳಬೇಕು.

ಎಲ್ಲ ಪ್ರಾಚೀನ ದೇವಾಲಯಗಳಲ್ಲಿ ಭದ್ರತೆ ಹಾಗೂ ಸಿಸಿ ಕ್ಯಾಮೆರಾ ವ್ಯವಸ್ಥೆ ಕಲ್ಪಿಸಿ, ವಿಗ್ರಹ ವಿರೂಪ ಪ್ರಕರಣಗಳ ಆರೋಪಿಗಳನ್ನು ಶೀಘ್ರ ಬಂಧಿಸಬೇಕು ಎಂದು ಆಗ್ರಹಿಸಿದರು.

> **ಪ್ರಾಚೀನ ದೇವಾಲಯಗಳ ವಿಗ್ರಹಗಳು ಮತ್ತು ಮಹಾತ್ಮರ ಪ್ರತಿಮೆಗಳ ಮೇಲಿನ ದಾಳಿಗಳನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ, ಆರೋಪಿಗಳನ್ನು ಬಂಧಿಸಿ ಶಾಶ್ವತ ಭದ್ರತಾ ವ್ಯವಸ್ಥೆ ಕಲ್ಪಿಸಬೇಕು.**
> – **ರಾಜೂ ಖಾನಪ್ಪನವರ**

ಮನವಿ ಸ್ವೀಕರಿಸಿದ ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್. ದುರ್ಗೇಶ್, ಸರ್ಕಾರದ ಗಮನಕ್ಕೆ ವಿಷಯವನ್ನು ತಂದು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಹೇಶ ರೋಖಡೆ, ಭರತ್ ಲದ್ದಿ, ಕುಮಾರ ನಡಗೇರಿ, ಕುಮಾರ ಮಿಟ್ಟಿಮಠ, ಆನಂದ ಅರಕೇರಿ, ಮಹೇಶ ಬಡಿಗೇರ, ಮಂಜು ಪೂಜಾರ, ವೀರಣ್ಣ ಹೆಬಸೂರ, ಬಸಯ್ಯ ಗಣಾಚಾರಿ, ಬಸವರಾಜ ಯಳವತ್ತಿ, ಮಹೇಶ ಕಂಬಾರ, ಪರಮೇಶ ಬೆಂತೂರ, ಬಸವರಾಜ ನವಲಿ, ಅಶೋಕ ಬಜಂತ್ರಿ, ಮುತ್ತಣ್ಣ ವಾಲ್ಮೀಕಿ, ಹುಲಿಗೆಪ್ಪ ವಾಲ್ಮೀಕಿ, ಶಿವಯೋಗಿ ಹಿರೇಮಠ ಹಾಗೂ ಸುನೀಲ ಮುಳ್ಳಾಳ ಉಪಸ್ಥಿತರಿದ್ದರು.

---

## ಜು.18ರಿಂದ ಗಣಿತ ಬಾಲ ಭಾಸ್ಕರ ರಸಪ್ರಶ್ನೆ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ಎಚ್.ಕೆ. ಪಾಟೀಲ ಪ್ರತಿಷ್ಠಾನ ಹಾಗೂ ಜಿ-ಎನ್‌ಟಿಟಿಎಫ್ ಸಹಯೋಗದಲ್ಲಿ 2026ನೇ ಸಾಲಿನ ‘ಗಣಿತ ಬಾಲ ಭಾಸ್ಕರ’ ರಸಪ್ರಶ್ನೆ ಸ್ಪರ್ಧೆಯು ಜುಲೈ 18ರಿಂದ ಆರಂಭವಾಗಲಿದ್ದು, ಜಿಲ್ಲೆಯ 140ಕ್ಕೂ ಹೆಚ್ಚು ಶಾಲೆಗಳ ಸುಮಾರು 20 ಸಾವಿರ ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಎಚ್.ಕೆ. ಪಾಟೀಲ ಪ್ರತಿಷ್ಠಾನದ ಸದಸ್ಯ ಆನಂದ ಪೊತ್ನಿಸ್ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ತಾರ್ಕಿಕ ಚಿಂತನೆ, ವಿಶ್ಲೇಷಣಾತ್ಮಕ ಸಾಮರ್ಥ್ಯ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಉದ್ದೇಶದಿಂದ ಪ್ರತಿವರ್ಷ ಈ ಸ್ಪರ್ಧೆ ಆಯೋಜಿಸಲಾಗುತ್ತಿದೆ ಎಂದರು.

ಜುಲೈ 18ರಂದು ಮೊದಲ ಹಂತದ ಲಿಖಿತ ಪರೀಕ್ಷೆ ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ನಡೆಯಲಿದೆ. ಜುಲೈ 25ರಂದು ಜಿ-ಎನ್‌ಟಿಟಿಎಫ್‌ನಲ್ಲಿ ಎರಡನೇ ಹಂತದ ಲಿಖಿತ ಪರೀಕ್ಷೆ ಜರುಗಲಿದ್ದು, ಮೊದಲ ಹಂತದಿಂದ



ಆಯ್ಕೆಯಾಗುವ ಸುಮಾರು 1,500 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಅಂತಿಮ ಹಂತ ಆಗಸ್ಟ್ 8ರಂದು ನಡೆಯಲಿದ್ದು, 60 ರಿಂದ 70 ವಿದ್ಯಾರ್ಥಿಗಳು ಅಂತಿಮ ಸುತ್ತಿನಲ್ಲಿ ಸ್ಪರ್ಧಿಸಲಿದ್ದಾರೆ ಎಂದು ತಿಳಿಸಿದರು.

ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವಾಗಿ ₹5 ಸಾವಿರ, ದ್ವಿತೀಯ ಬಹುಮಾನ ₹3 ಸಾವಿರ ಹಾಗೂ ತೃತೀಯ ಬಹುಮಾನ ₹2 ಸಾವಿರ ನಗದು ನೀಡಲಾಗುವುದು. ಸಮಾಧಾನಕರ ಬಹುಮಾನವಾಗಿ ₹1 ಸಾವಿರ ಹಾಗೂ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ವಿಶೇಷ ಬಹುಮಾನಗಳನ್ನೂ ನೀಡಲಾಗುವುದು ಎಂದರು.

ಕಳೆದ ವರ್ಷ 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ಮಾತ್ರ ಸ್ಪರ್ಧೆ ಆಯೋಜಿಸಲಾಗಿತ್ತು. ಈ ಬಾರಿ 10ನೇ ತರಗತಿ ವಿದ್ಯಾರ್ಥಿಗಳನ್ನೂ ಸೇರಿಸಿ ಸ್ಪರ್ಧೆಯನ್ನು ವಿಸ್ತರಿಸಲಾಗಿದೆ ಎಂದು ಹೇಳಿದರು.

ಕೃಷ್ಣೇಗೌಡ ಪಾಟೀಲ ಮಾತನಾಡಿ, ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ರಸಪ್ರಶ್ನೆ ಸ್ಪರ್ಧೆಗೆ ಸಂಬಂಧಿಸಿದ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವ ಜೊತೆಗೆ ವಿಜ್ಞಾನ ರಸಪ್ರಶ್ನೆಯನ್ನೂ ನಡೆಸುವ ಯೋಜನೆ ಇದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಿದ್ದಣ್ಣ ಬಂಗಾರಶೆಟ್ಟರ್, ಏಕನಾಥ ನಾಗನೂರ ಸೇರಿದಂತೆ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

---

ಕಳ್ಳತನ-ನಕಲಿ ಬಂಗಾರ ವಂಚನೆ ಪ್ರಕರಣ ಬಯಲಿಗೆ | ಮೂರು ಆರೋಪಿಗಳ ಬಂಧನ | ₹4.18 ಲಕ್ಷ ಮೌಲ್ಯದ ನಗದು, ಬೆಳ್ಳಿ ಆಭರಣ ಜಪ್ತಿ

## ಲಕ್ಷ್ಮೇಶ್ವರ ಪೊಲೀಸರಿಗೆ ಮತ್ತೊಂದು ಯಶಸ್ಸು




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ನಡೆದ ಮನೆ ಕಳ್ಳತನ, ಅಂಗಡಿ ಕಳ್ಳತನ ಹಾಗೂ ನಕಲಿ ಬಂಗಾರ ನೀಡಿ ಹಣ ವಂಚಿಸಿದ ನಾಲ್ಕು ಪ್ರತ್ಯೇಕ ಪ್ರಕರಣಗಳನ್ನು ಭೇದಿಸುವಲ್ಲಿ ಲಕ್ಷ್ಮೇಶ್ವರ ಪೊಲೀಸರು ಯಶಸ್ವಿಯಾಗಿದ್ದು, ಮೂವರು ಆರೋಪಿಗಳನ್ನು ಬಂಧಿಸಿ ₹4.18 ಲಕ್ಷ ಮೌಲ್ಯದ ನಗದು ಹಾಗೂ ಬೆಳ್ಳಿ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಫೆಬ್ರವರಿ 2 ಮತ್ತು 3ರಂದು ಭಾನು ಮಾರ್ಕೆಟ್‌ನಲ್ಲಿರುವ ಸಂತೋಷ ಕಾಶೆಟ್ಟಿ ಹಾಗೂ ಮಹೇಶ ಹೊಗೆಸೊಪ್ಪಿನ ಅವರ ಕಿರಾಣಿ ಮತ್ತು ಸ್ಟೇಷನರಿ ಅಂಗಡಿಗಳಲ್ಲಿ ನಡೆದ ಕಳ್ಳತನ, ಜೂನ್ 8ರಂದು ಸೊಪ್ಪಿನಕೇರಿಯ ನಾಗರತ್ನ ಹೂಗಾರ ಅವರ ಮನೆಯಲ್ಲಿ ನಡೆದ ಕಳ್ಳತನ ಹಾಗೂ ಅದೇ ದಿನ ಕೆಎಸ್‌ಆರ್‌ಟಿಸಿ ಡಿಪೋ ಸಮೀಪದ ಚಹಾ ಅಂಗಡಿಯಲ್ಲಿ ನಕಲಿ ಬಂಗಾರ ನೀಡಿ ಹಣ ಪಡೆದು ವಂಚಿಸಿದ ಪ್ರಕರಣ ಸೇರಿ ಒಟ್ಟು ನಾಲ್ಕು ಪ್ರಕರಣಗಳನ್ನು ಪೊಲೀಸರು ಭೇದಿಸಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಅವರ ಮಾರ್ಗದರ್ಶನ ಹಾಗೂ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಅವರ ಮೇಲ್ವಿಚಾರಣೆಯಲ್ಲಿ, ಶಿರಹಟ್ಟಿ ವೃತ್ತದ ಸಿಪಿಐ ಬಿ.ವಿ. ನ್ಯಾಮಗೌಡ ನೇತೃತ್ವದಲ್ಲಿ ಪಿಎಸ್‌ಐ ನಾಗರಾಜ ಗಡದ, ಅಪರಾಧ ವಿಭಾಗದ ಪಿಎಸ್‌ಐ ಟಿ.ಕೆ. ರಾಠೋಡ ಸೇರಿದಂತೆ ವಿಶೇಷ ತಂಡ ಕಾರ್ಯಾಚರಣೆ ನಡೆಸಿತು.

> ### ಪೊಲೀಸ್ ತಂಡಕ್ಕೆ ಎಸ್‌ಪಿ ಶ್ಲಾಘನೆ
> **ಪ್ರಕರಣ ಭೇದಿಸುವಲ್ಲಿ ಯಶಸ್ವಿಯಾದ ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡದ, ಪಿಎಸ್‌ಐ ಟಿ.ಕೆ. ರಾಠೋಡ, ಪ್ರೊಬೇಷನರಿ ಪಿಎಸ್‌ಐ ಸೂರ್ಯಕಾಂತ ಗುಗ್ಗರಿ, ಲಕ್ಷ್ಮೇಶ್ವರ ಠಾಣೆಯ ಸಿಬ್ಬಂದಿ ಹಾಗೂ ಗದಗ ಟೆಕ್ನಿಕಲ್ ಸೆಲ್‌ನ ಗುರು ಬೂದಿಹಾಳ ಮತ್ತು ಸಂಜು ಕೊರಡೂರ ಅವರ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಶ್ಲಾಘಿಸಿದ್ದಾರೆ.**


ಕಾರ್ಯಾಚರಣೆಯಲ್ಲಿ ಗೋವಾದಲ್ಲಿ ವಾಸವಾಗಿರುವ ಮೈನುದ್ದೀನ್ ತಂದೆ ಅಬ್ದುಲ್ ಅಜೀಂ ಕಿಲ್ಲೇದಾರ, ಒಬ್ಬ ಅಪ್ರಾಪ್ತ ಬಾಲಕ ಹಾಗೂ ಆಂಧ್ರಪ್ರದೇಶ ಮೂಲದ, ಹುಬ್ಬಳ್ಳಿಯಲ್ಲಿ ವಾಸವಾಗಿರುವ ತಮ್ಮಿಶೆಟ್ಟಿ ಲಕ್ಷ್ಮಿ ಅಲಿಯಾಸ್ ತಿರುಪತಮ್ಮ ಅವರನ್ನು ಬಂಧಿಸಲಾಗಿದೆ.

ಬಂಧಿತರಿಂದ 170 ಗ್ರಾಂ ಬೆಳ್ಳಿ ಆಭರಣ (ಅಂದಾಜು ಮೌಲ್ಯ ₹28 ಸಾವಿರ) ಹಾಗೂ ₹3.90 ಲಕ್ಷ ನಗದು ಸೇರಿದಂತೆ ಒಟ್ಟು ₹4.18 ಲಕ್ಷ ಮೌಲ್ಯದ ಆಸ್ತಿ ಜಪ್ತಿ ಮಾಡಲಾಗಿದೆ.

---

10 ಸಾವಿರಕ್ಕೂ ಹೆಚ್ಚು ಜನರ ಭಾಗವಹಿಸುವ ನಿರೀಕ್ಷೆ; ತಜ್ಞ ವೈದ್ಯರಿಂದ ತಪಾಸಣೆ: ಸಂಕನೂರ

## ನಾಳೆ ಬೃಹತ್ ಉಚಿತ ಆರೋಗ್ಯ ಶಿಬಿರ



**ವಿಜಯಸಾಕ್ಷಿ ಸುದ್ದಿ, ಗದಗ**

ಕೆ.ಎಲ್.ಇ. ಸಂಸ್ಥೆಯ ಆಶ್ರಯದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರದ ಉದ್ಘಾಟನಾ ಕಾರ್ಯಕ್ರಮ ಜುಲೈ 17ರಂದು ಬೆಳಿಗ್ಗೆ 10.30ಕ್ಕೆ ನಗರದ ಕೆ.ಎಲ್.ಇ. ಜೆ.ಟಿ. ಕಾಲೇಜಿನ ಸಭಾಭವನದಲ್ಲಿ ನಡೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಕರೆ ನೀಡಿದರು. ನಗರದ ಪತ್ರಿಕಾಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆ.ಎಲ್.ಇ. ಡಾ. ಪ್ರಭಾಕರ ಕೋರೆ ಆಸ್ಪತ್ರೆ, ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರ, ಕಾಹೇರ ಬೆಳಗಾವಿ, ಕೆ.ಎಲ್.ಇ. ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರ, ಹುಬ್ಬಳ್ಳಿ ಸೇರಿದಂತೆ ವಿವಿಧ ಆಸ್ಪತ್ರೆಗಳ ಸಹಯೋಗದಲ್ಲಿ ಶಿಬಿರ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗದಗ ತಾಲೂಕಿನ ಸುಮಾರು 50 ಗ್ರಾಮಗಳಿಂದ 10 ಸಾವಿರಕ್ಕೂ ಅಧಿಕ ಜನರು ಭಾಗವಹಿಸುವ ನಿರೀಕ್ಷೆಯಿದ್ದು, ಈಗಾಗಲೇ 8 ಸಾವಿರಕ್ಕೂ ಹೆಚ್ಚು ಮಂದಿ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ. ಸ್ಥಳದಲ್ಲಿಯೇ ನೋಂದಣಿಗೆ ಅವಕಾಶ ಕಲ್ಪಿಸಲಾಗಿದ್ದು, ಅದಕ್ಕಾಗಿ 20 ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗಿದೆ ಎಂದರು.

ಶಿಬಿರದಲ್ಲಿ ಹೃದಯ, ಮೂಳೆ-ಕೀಲು, ಮೂತ್ರಪಿಂಡ, ಸಾಮಾನ್ಯ ಶಸ್ತ್ರಚಿಕಿತ್ಸೆ, ಕಿವಿ-ಮೂಗು-ಗಂಟಲು, ಕಣ್ಣಿನ, ಸ್ತ್ರೀರೋಗ ಮತ್ತು ಪ್ರಸೂತಿ, ಮಕ್ಕಳ, ಚರ್ಮ, ನರರೋಗ, ಪ್ಲಾಸ್ಟಿಕ್ ಶಸ್ತ್ರಚಿಕಿತ್ಸೆ, ಕ್ಯಾನ್ಸರ್, ದಂತ, ಮನೋವೈದ್ಯಕೀಯ, ಭೌತಿಕ ಚಿಕಿತ್ಸೆ, ಆಯುರ್ವೇದ ಹಾಗೂ ಹೋಮಿಯೋಪತಿ ಸೇರಿದಂತೆ ವಿವಿಧ ವಿಭಾಗಗಳ ತಜ್ಞ ವೈದ್ಯರು ಉಚಿತ ತಪಾಸಣೆ ನಡೆಸಿ ಅಗತ್ಯ ಔಷಧ ವಿತರಿಸಲಿದ್ದಾರೆ. ಅಗತ್ಯವಿರುವ ರೋಗಿಗಳನ್ನು ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಗುವುದು ಎಂದು ಹೇಳಿದರು.

ಶಿಬಿರದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯವನ್ನು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದು, ಕೆ.ಎಲ್.ಇ. ಸಂಸ್ಥೆಯ ಮಾಜಿ ನಿರ್ದೇಶಕ ಶಂಕ್ರಣ್ಣ ಮುನವಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಶಾಸಕ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಡಿ.ಆರ್. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮತ್ತು ಡಾ. ಎಚ್.ಎಸ್. ನೀಲಗುಂದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.


ಸುದ್ದಿಗೋಷ್ಠಿಯಲ್ಲಿ ಎಸ್.ಬಿ. ಸಂಶಿಮಠ, ಆರ್.ಟಿ. ಪವಾಡಶೆಟ್ಟರ್, ಅಶೋಕ ನಿಲೂಗಲ್, ಬಿ.ಜಿ. ಶೆಲ್ಲಿಕೇರಿ, ರಜನಿ ಪಾಟೀಲ ಹಾಗೂ ಡಾ. ಅಲ್ಲಮಪ್ರಭು ಕುಡಚಿ ಉಪಸ್ಥಿತರಿದ್ದರು.

### ಅಯೋಧ್ಯೆ ರಾಮ ಮಂದಿರ ಹಗರಣ ಆರೋಪಕ್ಕೆ ಸಂಬಂಧಿಸಿ ಬಿಜೆಪಿ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ

# ರಾಮನ ಹೆಸರಲ್ಲಿ ಅಧಿಕಾರ... ಭಕ್ತರ ಕಾಣಿಕೆಗೆ ಕನ್ನ!

**ವಿಜಯಸಾಕ್ಷಿ ಸುದ್ದಿ, ಗದಗ**

ಅಯೋಧ್ಯೆಯ ರಾಮ ಮಂದಿರದಲ್ಲಿ ಭಕ್ತರು ಸಮರ್ಪಿಸಿದ ಕಾಣಿಕೆ ಹಣ ಹಾಗೂ ಅಮೂಲ್ಯ ವಸ್ತುಗಳ ದುರ್ಬಳಕೆ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಉತ್ತರ ಪ್ರದೇಶ ಸರ್ಕಾರ ಹಾಗೂ ಬಿಜೆಪಿ ವಿರುದ್ಧ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಮ ಮಂದಿರದ ಕಾಣಿಕೆ ನಿರ್ವಹಣೆಯಲ್ಲಿ ಭಾರೀ ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿಬಂದಿರುವುದು ಗಂಭೀರ ವಿಷಯವಾಗಿದ್ದು, ಇದರ ನೈತಿಕ ಹೊಣೆಯನ್ನು ಉತ್ತರ ಪ್ರದೇಶ ಸರ್ಕಾರ



ಹೊರಬೇಕು ಎಂದು ಆಗ್ರಹಿಸಿದ್ದಾರೆ.

ಸಾವಿರಾರು ಕೋಟಿ ರೂಪಾಯಿ ಮೌಲ್ಯದ ಹಣ ಹಾಗೂ ಚಿನ್ನ-ಬೆಳ್ಳಿ ಆಭರಣಗಳ ಲೆಕ್ಕಪತ್ರಗಳಲ್ಲಿ ವ್ಯತ್ಯಾಸ ಕಂಡು ಬಂದಿದೆ ಎಂಬ ವರದಿಗಳು ಹೊರಬಿದ್ದಿವೆ ಎಂದು ಆರೋಪಿಸಿದ ಅವರು, ಪ್ರಕರಣದ ಕುರಿತು ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ದೇವಾಲಯದ ಕೆಲ ಸಿಬ್ಬಂದಿಗಳ ವಿರುದ್ಧ ಆದಾಯಕ್ಕೆ ಮೀರಿದ ಆಸ್ತಿ ಹೊಂದಿರುವ ಆರೋಪಗಳು ಕೇಳಿ ಬಂದಿವೆ. ಕೆಲವರ ಮನೆಗಳಲ್ಲಿ ನಗದು ಪತ್ತೆಯಾಗಿದೆ ಎಂಬ ಮಾಹಿತಿಯೂ ಹೊರಬಂದಿದೆ.

ಇಂತಹ ಗಂಭೀರ ಆರೋಪಗಳಿರುವಾಗ ಕೆಳಹಂತದ ಸಿಬ್ಬಂದಿ ವಿರುದ್ಧ ಮಾತ್ರ ಕ್ರಮ ಕೈಗೊಂಡು, ನಿಜವಾದ ಹೊಣೆಗಾರರನ್ನು ರಕ್ಷಿಸುವ ಪ್ರಯತ್ನ ನಡೆಯಬಾರದು ಎಂದು ಅವರು ಹೇಳಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಎಸ್‌ಐಟಿ ವರದಿಯ ಆಧಾರದ ಮೇಲೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಅಗತ್ಯವಿದ್ದರೆ ಸ್ವತಂತ್ರ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಭಕ್ತರು ನಂಬಿಕೆಯಿಂದ ನೀಡುವ ಕಾಣಿಕೆಯನ್ನು ಪಾರದರ್ಶಕವಾಗಿ ನಿರ್ವಹಿಸುವ ಜವಾಬ್ದಾರಿ ಸರ್ಕಾರ ಮತ್ತು ಸಂಬಂಧಪಟ್ಟ ಆಡಳಿತ ಮಂಡಳಿಯ ಮೇಲಿದೆ. ಈ ಕುರಿತು ಉದ್ಭವಿಸಿರುವ ಅನುಮಾನಗಳಿಗೆ ಸೂಕ್ತ ಉತ್ತರ ನೀಡಬೇಕು ಎಂದು ಅಶೋಕ ಮಂದಾಲಿ ಒತ್ತಾಯಿಸಿದ್ದಾರೆ.

**ಕಾಂಗ್ರೆಸ್‌ನ ಪ್ರಮುಖ ಆರೋಪಗಳು**

1. ರಾಮ ಮಂದಿರದ ಕಾಣಿಕೆ ನಿರ್ವಹಣೆಯಲ್ಲಿ ಭಾರೀ ಅಕ್ರಮ ನಡೆದಿದೆ ಎಂಬ ಆರೋಪ
2. ಪ್ರಕರಣದ ಕುರಿತು ಪಾರದರ್ಶಕ ಹಾಗೂ ಸ್ವತಂತ್ರ ತನಿಖೆ ನಡೆಸಬೇಕು ಎಂಬ ಒತ್ತಾಯ
3. ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ
4. ಭಕ್ತರ ನಂಬಿಕೆಗೆ ಧಕ್ಕೆ ತರುವ ಯಾವುದೇ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂಬ ಒತ್ತಾಯ

**ಸಂಕ್ಷಿಪ್ತ ಸುದ್ದಿಗಳು**

## ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕ್‌ಗೆ ₹3.81 ಕೋಟಿ ಲಾಭ



**ವಿಜಯಸಾಕ್ಷಿ ಸುದ್ದಿ, ಗದಗ**

ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕ್ ಲಿ., ಗದಗ 202526ನೇ ಸಾಲಿನಲ್ಲಿ ತೆರಿಗೆ ಪೂರ್ವ ₹3.81 ಕೋಟಿ ಲಾಭ ಗಳಿಸಿದ್ದು, ಸದಸ್ಯರಿಗೆ ಶೇ.12 ಡಿವಿಡೆಂಡ್ ಘೋಷಿಸಲಾಗಿದೆ ಎಂದು ಬ್ಯಾಂಕ್ ಅಧ್ಯಕ್ಷ ಮೋಹನ ಟಿ. ಕೋಟಿ ತಿಳಿಸಿದರು.

ನಗರದ ಎಸ್.ಬಿ.ಎಸ್. ಗಾರ್ಡನ್‌ನಲ್ಲಿ ನಡೆದ ಬ್ಯಾಂಕಿನ 62ನೇ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ಮಾತನಾಡಿದ ಅವರು, ಬ್ಯಾಂಕಿನ ಎಲ್ಲ ಶಾಖೆಗಳಲ್ಲಿ ಕೋರ್ ಬ್ಯಾಂಕಿಂಗ್, ಐಎಂಪಿಎಸ್, ಎಟಿಎಂ, ಮೊಬೈಲ್ ಬ್ಯಾಂಕಿಂಗ್ ಸೇರಿದಂತೆ ಡಿಜಿಟಲ್ ಸೇವೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ ಎಂದರು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ ಹಾಗೂ ಸ್ನಾತಕೋತ್ತರ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಸದಸ್ಯರ ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು. ರಾಷ್ಟ್ರ ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತ ಸದಸ್ಯರಿಗೆ ಪ್ರೋತ್ಸಾಹಧನ, ಸದಸ್ಯರ ಕಲ್ಯಾಣ ನಿಧಿ ಹಾಗೂ ಅಪಘಾತ ವಿಮೆ ಸೇರಿದಂತೆ ವಿವಿಧ ಕಲ್ಯಾಣ ಯೋಜನೆಗಳನ್ನು ಮುಂದುವರಿಸಲಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಕುಬೇರಗೌಡ ಎಸ್. ಪರ್ವತಗೌಡ್ರ, ಆಡಳಿತ ಮಂಡಳಿ ಸದಸ್ಯರಾದ ವಿಶ್ವನಾಥ ಸಿ. ರಾಮನಕೊಪ್ಪ, ಶರಣಬಸಪ್ಪ ಕೆ. ಕುರಡಗಿ, ತೋಟೋಸಾ ಆರ್. ಭಾಂಡಗೆ, ಸಂತೋಷ ಬಿ. ಅಬ್ಬಿಗೇರಿ, ಚಂದ್ರಕಾಂತ ಎಸ್. ಸಂಕಣ್ಣವರ, ಶಿವಾನಂದ ಎಚ್. ನಡವಲಗುಡ್ಡ, ಚನವೀರಪ್ಪ ಟಿ. ದುಂದೂರ, ಶಿವವ್ವ ಕೆ. ಕುರಡಗಿ, ಪಾರ್ವತಿದೇವಿ ಎಸ್. ಸಂಕಣ್ಣವರ, ವೃತ್ತಿಪರ ನಿರ್ದೇಶಕರಾದ ಸಿ.ಎ. ಬಸವರಾಜ ಎಂ. ಬಳಗೇರಿ ಹಾಗೂ ಬಸವರಾಜ ಎಂ. ಬಂದಕ್ಕನವರ, ಬ್ಯಾಂಕಿನ ಶೇರುದಾರರು, ಠೇವಣಿದಾರರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಬೆಳೆ ಸಮೀಕ್ಷೆಯೇ ರೈತರ ಕೊನೆಯ ಆಸರೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆ ಕೊರತೆಯಿರುವ ಹಿನ್ನೆಲೆಯಲ್ಲಿ ರೈತರು ಜುಲೈ 18ರೊಳಗೆ ಕಡ್ಡಾಯವಾಗಿ ಬೆಳೆ ಸಮೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಕೃಷಿ ಇಲಾಖೆ ಮನವಿ ಮಾಡಿದೆ. ಗದಗ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆ ಅಭಾವ ಕಂಡುಬಂದಿದ್ದು, ಹಿಂಗಾರು ಮಳೆಯೂ ಅನುಮಾನವಾಗಿರುವ ಕಾರಣ ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ರೈತರಿಗೆ ಬೆಳೆ ಸಮೀಕ್ಷೆಯೇ ಕೊನೆಯ ಆಸರೆ ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಜೂನ್ ತಿಂಗಳಲ್ಲಿ ಶೇ.25ರಷ್ಟು ಹಾಗೂ ಜುಲೈ 10ರವರೆಗೆ ಶೇ.10.2ರಷ್ಟು ಮಳೆ ಕೊರತೆ ದಾಖಲಾಗಿದೆ. ಜಿಲ್ಲೆಯಲ್ಲಿ 2,57,401 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದ್ದು, ಮಳೆ ಅಭಾವದಿಂದ ಬೆಳೆ ನಷ್ಟದ ಆತಂಕ ಎದುರಾಗಿದೆ.

ಈಗಾಗಲೇ ಪೂರ್ವ ಮುಂಗಾರು ಬೆಳೆ ಸಮೀಕ್ಷೆ ಆರಂಭವಾಗಿದ್ದು, ರೈತರು ಸ್ವತಃ ಅಥವಾ ಖಾಸಗಿ ನಿವಾಸಿಗಳ ಸಹಾಯದಿಂದ ಬೆಳೆ ಸಮೀಕ್ಷೆ ಮಾಡಿಸಿಕೊಳ್ಳಬಹುದು. ಬೆಳೆ ಸಮೀಕ್ಷೆಯ ಮಾಹಿತಿಯನ್ನೇ ಬೆಳೆ ಸಾಲ, ಬೆಳೆ ವಿಮೆ, ಬೆಂಬಲ ಬೆಲೆ, ಬೆಳೆ ಪರಿಹಾರ, ಪಹಣಿ ದಾಖಲಾತಿ ಹಾಗೂ ವಿವಿಧ ಸರ್ಕಾರಿ ಸೌಲಭ್ಯಗಳ ಆಧಾರವಾಗಿ ಪರಿಗಣಿಸಲಾಗುತ್ತದೆ.

ಜಿಲ್ಲೆಯಲ್ಲಿ ಒಟ್ಟು 3,34,987 ತಾಕುಗಳಿದ್ದು, ಇದುವರೆಗೆ 56,889 ತಾಕುಗಳ ಸಮೀಕ್ಷೆ ಪೂರ್ಣಗೊಂಡಿದೆ. ಇನ್ನೂ 2,78,098 ತಾಕುಗಳ ಸಮೀಕ್ಷೆ ಬಾಕಿ ಇದ್ದು, ಜುಲೈ 18ರೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

## ನಿಧನ
### ಶ್ರೀಮತಿ ಮೀನಾಕ್ಷಿ (ಮಲ್ಲಮ್ಮ) ರಡ್ಡೇರ



ಗದಗ: ನಗರದ ಕಳಸಾಪೂರ ರಸ್ತೆ ಬಾಪೂಜಿ ಲೇಔಟ್ ನಿವಾಸಿ ಶ್ರೀಮತಿ ಮೀನಾಕ್ಷಿ (ಮಲ್ಲಮ್ಮ) ಮಲ್ಲಿಕಾರ್ಜುನ ರಡ್ಡೇರ (64) ಅವರು ಮಂಗಳವಾರ ನಿಧನರಾದರು. ಮೃತರು ಪುತ್ರ, ಪುತ್ರಿ, ಸೊಸೆ, ಅಳಿಯ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮಂಗಳವಾರ ಸಂಜೆ ನೆರವೇರಿತು.

## ವಿಶ್ವ ಜನ ಸಂಖ್ಯೆ ದಿನಾಚರಣೆ ಅಂಗವಾಗಿ ಜುಲೈ 18ರಂದು ಜಾಗೃತಿ ಜಾಥಾ

**ವಿಜಯಸಾಕ್ಷಿ ಸುದ್ದಿ, ವಿಜಯನಗರ**

ಜಿಲ್ಲಾಡಳಿತ, ಮಲ್ಲಿಗೆ ಪ್ಯಾರಾ ಮೆಡಿಕಲ್ ಕಾಲೇಜ್ ಮತ್ತು ತುಂಗಭದ್ರ ಸ್ಕೂಲ್ ಆಫ್ ನರ್ಸಿಂಗ್, ಟಿ.ಎಂ.ಇ ಸೊಸೈಟಿ ಆಫ್ ನರ್ಸಿಂಗ್ ಕಾಲೇಜು ಸಹಯೋಗದಲ್ಲಿ ಜುಲೈ 18ರಂದು ವಿಶ್ವ ಜನ ಸಂಖ್ಯೆ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9 ಗಂಟೆಗೆ ಜಾಥಾ ಹಮ್ಮಿಕೊಳ್ಳಲಾಗಿದೆ. ಜಾಥವು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಛೇರಿ (ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣ) ಉದ್ಘಾಟನೆಗೊಂಡು ನಂತರ ಪುಣ್ಯಮೂರ್ತಿ ಸರ್ಕಲ್, ಬಸ್ ನಿಲ್ದಾಣ, ಡಾ. ಪುನೀತ್ ರಾಜ್ ಕುಮಾರ್ ಸರ್ಕಲ್, ಅಂಬೇಡ್ಕರ್ ಸರ್ಕಲ್, ಮಾರ್ಗವಾಗಿ ಚಲಿಸಿ ದೊಡ್ಡ ಮಸೀದಿ ಮಾರ್ಗದಿಂದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಮುಕ್ತಾಯಗೊಳ್ಳಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು ತಿಳಿಸಿದ್ದಾರೆ.

## ಡಾ.ಸಂಗಮೇಶ ತಮ್ಮನಗೌಡ್ರಗೆ ಬಸವಶ್ರೀ ಗೌರವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಿರಿಯ ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಅವರಿಗೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆಯನ್ನು ಗುರುತಿಸಿ ವಿಜಯಪುರದ ರಾಜರಾಜೇಶ್ವರಿ ಕಲ್ಯಾಣ ಮಂಟಪದಲ್ಲಿ ಕಾವ್ಯ ಶ್ರೀ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸೋಮವಾರ ಟಿಬಸವಶ್ರೀ ಪ್ರಶಸ್ತಿಟಿ ಪ್ರದಾನ ಮಾಡಿ ಗೌರವಿಸಲಾಯಿತು.



ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷ ರೋ. ಡಾ. ಜಿ. ಶಿವಣ್ಣ, ಡಾ. ಸಂಗಮೇಶ ತಮ್ಮನಗೌಡ್ರ ಅವರು ಸಾಹಿತ್ಯ ಮತ್ತು ಸಂಘಟನಾ ಕ್ಷೇತ್ರದಲ್ಲಿ ನಿರಂತರ ಕ್ರಿಯಾಶೀಲ ವ್ಯಕ್ತಿತ್ವ ಹೊಂದಿದ್ದು, ಹದಿಮೂರು ಸಾಹಿತ್ಯ ಪ್ರಕಾರಗಳಲ್ಲಿ 115 ಕೃತಿಗಳನ್ನು ರಚಿಸಿರುವುದು ಅವರ ಅಪರೂಪದ ಸಾಹಿತ್ಯ ಸಾಧನೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ರಾಮಗಿರಿಯ ವರಕವಿ ಡಾ. ದ.ರಾ. ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆಯ ಸಂಸ್ಥಾಪಕ ಅಧ್ಯಕ್ಷರಾಗಿ, ಗದಗ ಜಿಲ್ಲಾ ಪ್ರಜ್ಞಾವಿಕಾಸ ಚಿಂತನಶೀಲ ಅಕಾಡೆಮಿ ಹಾಗೂ ಕಾಸರಗೋಡಿ ಕನ್ನಡ ಭವನ ಮತ್ತು ಗ್ರಂಥಾಲಯದ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಅವರು ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ಈ ಪ್ರಶಸ್ತಿ ನೀಡಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸರ್ವಾಧ್ಯಕ್ಷ ಮಲ್ಲಿಕಾರ್ಜುನ ಭೃಂಗಿಮಠ, ಪೂಜ್ಯ ಬಸವಲಿಂಗ ಶರಣರು, ಡಾ. ಸೈಯದ್ ಫೈರೋಜ್ ಹುಸೇನಿ ಸಾನ್ನಿಧ್ಯ ವಹಿಸಿದ್ದರು. ಡಾ. ಪ್ರಭುಗೌಡ ಬಿ. ಲಿಂಗದಹಳ್ಳಿ, ಪ್ರೊ. ಸುರೇಶ ಗಂಡನಹಳ್ಳಿ, ಅಲ್ ಹಾಜ್ ಡಾ. ಜಿ.ಡಿ. ಕೊಟ್ನಾಳ ದಂಪತಿ, ಶರಣು ಸಿಂಧೆ, ಪಂಡಿತ ಅವಟಿ, ಶಂಕರ ಶಿಳ್ಳಿನ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಶೈಲಾ ಮಠಪತಿ ಕಾರ್ಯಕ್ರಮ ನಿರೂಪಿಸಿದರು.

## ಅಣ್ಣಿಗೇರಿ ರೈಲ್ವೆ ನಿಲ್ದಾಣಕ್ಕೆ ಆದಿಕವಿ ಪಂಪ ಹೆಸರಿಡಿ



**ವಿಜಯಸಾಕ್ಷಿ ಸುದ್ದಿ ಅಣ್ಣಿಗೇರಿ**

ಕನ್ನಡದ ಆದಿಕವಿ ಪಂಪನ ಜನ್ಮಸ್ಥಳವಾದ ಅಣ್ಣಿಗೇರಿಯ ರೈಲ್ವೆ ನಿಲ್ದಾಣಕ್ಕೆ ಟಿಆದಿಕವಿ ಪಂಪ ರೈಲ್ವೆ ನಿಲ್ದಾಣಟಿ ಎಂದು ನಾಮಕರಣ ಮಾಡಬೇಕೆಂಬ ಬೇಡಿಕೆ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ.

ಈ ಸಂಬಂಧ ಅಕಾಡೆಮಿ ಫಾರ್ ಕ್ರಿಯೇಟಿವ್ ಲರ್ನಿಂಗ್ ವತಿಯಿಂದ ನಡೆಸಲಾಗುತ್ತಿರುವ ನಿರಂತರ ಹೋರಾಟ ಮತ್ತು ಪ್ರಯತ್ನಗಳ ಸಮಗ್ರ ದಾಖಲೆ ಪುಸ್ತಕವನ್ನು ಧಾರವಾಡ ಜಿಲ್ಲಾಧಿಕಾರಿಗಳು ಹಾಗೂ ನೈರುತ್ಯ ರೈಲ್ವೆಯ ಮಹಾಪ್ರಬಂಧಕರಿಗೆ ಅಧಿಕೃತವಾಗಿ ಸಲ್ಲಿಸಲಾಯಿತು.

ಜತೆಗೆ, ಈ ಬೇಡಿಕೆಯನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ತುರ್ತಾಗಿ ಶಿಫಾರಸು ಮಾಡುವಂತೆ ಮನವಿ ಪತ್ರವನ್ನೂ ಸಲ್ಲಿಸಲಾಯಿತು.

ಕನ್ನಡ ಸಾಹಿತ್ಯದ ಆದಿಕವಿ ಪಂಪ ಅವರ ಕೊಡುಗೆ ಅಪಾರವಾಗಿದ್ದು, ಅವರ ಜನ್ಮಭೂಮಿಯಾದ ಅಣ್ಣಿಗೇರಿಯ ರೈಲ್ವೆ ನಿಲ್ದಾಣಕ್ಕೆ ಅವರ ಹೆಸರನ್ನು ನಾಮಕರಣ ಮಾಡುವುದು ಕನ್ನಡ ನಾಡು, ಸಾಹಿತ್ಯ ಮತ್ತು ಇತಿಹಾಸಕ್ಕೆ ಸಲ್ಲಿಸುವ ಸೂಕ್ತ ಗೌರವವಾಗಲಿದೆ ಎಂದು ಅಕಾಡೆಮಿ ಅಭಿಪ್ರಾಯಪಟ್ಟಿದೆ.

ಈ ಸಂದರ್ಭದಲ್ಲಿ ಅಕಾಡೆಮಿ ಫಾರ್ ಕ್ರಿಯೇಟಿವ್ ಲರ್ನಿಂಗ್ ಸಂಸ್ಥೆಯ ಅಧ್ಯಕ್ಷ ಡಾ. ಮಹಮ್ಮದ್ ಸಾದಿಕ್ ಸೈಯದ್, ನಿರ್ದೇಶಕರಾದ ಶಿವಾನಂದ ಚವಡಿ, ವಿಠ್ಠಲ ರಾಮಣ್ಣವರ ಹಾಗೂ ಶಿವಾನಂದ ಕಪ್ಪತ್ತನವರ ಉಪಸ್ಥಿತರಿದ್ದರು.

## ರಸ್ತೆ ಅಭಿವೃದ್ಧಿಗೆ ಆಗ್ರಹಿಸಿ ಇಂದು ಪಾದಯಾತ್ರೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಂಬ್ರಹಳ್ಳಿಯಿಂದ ಹಗರಿಬೊಮ್ಮನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಸಂಪೂರ್ಣ ಹದಗೆಟ್ಟಿರುವುದನ್ನು ಖಂಡಿಸಿ ಹಾಗೂ ತುರ್ತಾಗಿ ಮರು ಡಾಂಬರೀಕರಣಕ್ಕೆ ಆಗ್ರಹಿಸಿ ಜುಲೈ 16ರಂದು ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಜಿಪಂ ಮಾಜಿ ಸದಸ್ಯ ಅಕ್ಕಿ ತೋಟೇಶ್ ತಿಳಿಸಿದ್ದಾರೆ.

ತಂಬ್ರಹಳ್ಳಿ ಉತ್ತರ ಭಾಗದ ಸಾರ್ವಜನಿಕರಿಗೆ ಕರಪತ್ರ ವಿತರಿಸಿ ಮಾತನಾಡಿದ ಅವರು, ತಂಬ್ರಹಳ್ಳಿಹಗರಿಬೊಮ್ಮನಹಳ್ಳಿ (16 ಕಿ.ಮೀ.), ಹಗರಿಕ್ಯಾದಿಗಿಹಳ್ಳಿಉಪನಾಯಕನಹಳ್ಳಿ (10 ಕಿ.ಮೀ.) ಹಾಗೂ ತಂಬ್ರಹಳ್ಳಿಜಿ.ಕೋಡಿಹಳ್ಳಿ (9 ಕಿ.ಮೀ.) ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಸಾರ್ವಜನಿಕರು ನಿತ್ಯ ಜೀವದ ಹಂಗು ತೊರೆದು ಸಂಚರಿಸುವಂತಾಗಿದೆ ಎಂದು ಆರೋಪಿಸಿದರು.

ಈ ರಸ್ತೆಗಳನ್ನು ತಂಬ್ರಹಳ್ಳಿ, ಬಂಡಿಕ್ಯಾಂಪ್, ತೆಲುಗೋಳಿ, ರಾಮೇಶ್ವರಬಂಡಿ, ಕಿತ್ತೂರು, ಮುತ್ಕೂರು, ಸೀಗನಹಳ್ಳಿ, ಬನ್ನಿಗೋಳ, ಕೃಷ್ಣಾಪುರ, ಬಸರಕೋಡು, ಬಸರಕೋಡು ತಾಂಡಾ, ಚಿಲುಗೋಡು, ಯಡ್ರಾಮ್ಮನಹಳ್ಳಿ, ಸೊಬಟಿ ಹಾಗೂ ಹಗರಿಕ್ಯಾದಿಗಿಹಳ್ಳಿ ಸೇರಿದಂತೆ ಹಲವು ಗ್ರಾಮಗಳ ಜನರು ಅವಲಂಬಿಸಿದ್ದಾರೆ. ರಸ್ತೆ ದುಸ್ಥಿತಿಯಿಂದ ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಹಾಗೂ ರೋಗಿಗಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ರಸ್ತೆ ದುರಸ್ತಿಗೆ ಹಲವು ಬಾರಿ ಜನಪ್ರತಿನಿಧಿಗಳು ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗದ ಹಿನ್ನೆಲೆಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜುಲೈ 16ರಂದು ಬೆಳಿಗ್ಗೆ 6.30ಕ್ಕೆ ತಂಬ್ರಹಳ್ಳಿಯ ಶ್ರೀ ಕೊಟ್ಟೂರೇಶ್ವರ ದೇವಸ್ಥಾನದಿಂದ ಪಾದಯಾತ್ರೆ ಆರಂಭವಾಗಿ ಹಗರಿಬೊಮ್ಮನಹಳ್ಳಿವರೆಗೆ ಸಾಗಲಿದ್ದು, ಬಳಿಕ ತಹಸೀಲ್ದಾರ್ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಸದಸ್ಯ ಪಿ. ಕೊಟ್ರೇಶ್, ಏಣ್ಗಿ ರಾಮಣ್ಣ, ಗೌರಜ್ಜನವರ ಮಲ್ಲಿಕಾರ್ಜುನ, ಕಾಶೀಂಪೀರ, ಏಣ್ಗಿ ರವಿ, ಬೆಟಗೇರಿ ನಿಂಗಪ್ಪ, ಕ್ಯಾದಿಗಿಹಳ್ಳಿ ನಿಂಗರಾಜ್ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ಮಾಧ್ಯಮಗಳು ಸಮಾಜದ ಕಣ್ಣು ತೆರೆಸುವ ಶಕ್ತಿ: ಡಾ. ಮಹೇಶ್ವರ ಸ್ವಾಮೀಜಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಆಧುನಿಕ ಕಾಲಘಟ್ಟದಲ್ಲಿ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳು ಸಮಾಜದ ಕಣ್ಣು ತೆರೆಸುವ ಮಹತ್ವದ ಕೆಲಸ ಮಾಡುತ್ತಿದ್ದು, ಸಮಾಜದಲ್ಲಿ ನಡೆಯುವ ಅನ್ಯಾಯ, ಅಪರಾಧ ಮತ್ತು ಅಕ್ರಮಗಳನ್ನು ಜನರ ಮುಂದಿಡುವ ಮೂಲಕ ಜಾಗೃತಿ ಮೂಡಿಸುತ್ತಿವೆ ಎಂದು ಸುಕ್ಷೇತ್ರ ನಂದಿಪುರದ ಡಾ. ಮಹೇಶ್ವರ ಸ್ವಾಮೀಜಿ ಹೇಳಿದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ವತಿಯಿಂದ ಆಯೋಜಿಸಿರುವ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಆಹ್ವಾನ ಪತ್ರವನ್ನು ಸ್ವೀಕರಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಇಂದು ಮಾಧ್ಯಮಗಳ ಅಸ್ತಿತ್ವದಿಂದಲೇ ಸಮಾಜದಲ್ಲಿ ನಡೆಯುವ ಅನೇಕ ಅಪರಾಧ ಕೃತ್ಯಗಳು ಬಯಲಾಗುತ್ತಿವೆ. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಪತ್ರಿಕಾ ದಿನಾಚರಣೆಯಂತಹ ಕಾರ್ಯಕ್ರಮಗಳು ಮಾಧ್ಯಮಗಳ ಜವಾಬ್ದಾರಿಯನ್ನು ಮತ್ತಷ್ಟು ಬಲಪಡಿಸುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಕಾರ್ಯಾಧ್ಯಕ್ಷ ಹಾಗೂ ದಿ ಹಂಪಿ ವರ್ಲ್ಡ್ ಪತ್ರಿಕೆಯ ಸಂಪಾದಕರಾದ ಎಂ. ಶಿವಮೂರ್ತಿ, ಅಧ್ಯಕ್ಷ ಜಿ. ಸೋಮನಾಥ, ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರಪ್ಪ, ಉಪಾಧ್ಯಕ್ಷ ಸಂತೋಷ್, ಜಿಲ್ಲಾ ಉಪಾಧ್ಯಕ್ಷ ಎಂ. ಮಂಜುನಾಥ, ಖಜಾಂಚಿ ಪರಶುರಾಮ, ಸದಸ್ಯರಾದ ಮುಂಡರಗಿ ಮಂಜುನಾಥ, ಶಿವಶಂಕರ್ ನಾಯ್ಕ್, ಕಡಲಬಾಳು ಮಾಂತೇಶ್ ಉಪಸ್ಥಿತರಿದ್ದರು.

## ಸಾಮಾಜಿಕ ಕಾಳಜಿಯ ದೇವಿ ಈ ವಾರ ಬಿಡುಗಡೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸೂರ್ಯ ವಿಷನ್ ಬೆಂಗಳೂರು ನಿರ್ಮಾಣದ ದೇವಿಟಿ ಕನ್ನಡ ಚಲನಚಿತ್ರ ಈ ವಾರ ರಾಜ್ಯಾದ್ಯಂತ ತೆರೆ ಕಾಣುತ್ತಿದ್ದು, ಮಕ್ಕಳ ಕನಸುಗಳು, ಪೋಷಕರ ಮಹತ್ವಾಕಾಂಕ್ಷೆ ಹಾಗೂ ಸಾಮಾಜಿಕ ಜವಾಬ್ದಾರಿಯಂತಹ ಸೂಕ್ಷ್ಮ ವಿಷಯಗಳನ್ನು ತೆರೆ ಮೇಲೆ ಕಟ್ಟಿಕೊಡಲಿದೆ.



ಬಡತನದಲ್ಲಿ ಬದುಕುತ್ತಿರುವ ತಾಯಿ ರೇಣುಕಾ ತನ್ನ ಮಗಳು ಗೌರಿ ಚಿತ್ರರಂಗದಲ್ಲಿ ದೊಡ್ಡ ನಾಯಕಿಯಾಗಿ ಹೆಸರು, ಹಣ ಮತ್ತು ಗೌರವ ಗಳಿಸಬೇಕು ಎಂಬ ಕನಸು ಕಾಣುತ್ತಾಳೆ. ಆದರೆ ಗೌರಿ ವೈದ್ಯೆಯಾಗಿ ಸಮಾಜಸೇವೆ ಮಾಡುವ ಕನಸು ಹೊಂದಿರುತ್ತಾಳೆ. ಮಗಳ ಇಚ್ಛೆ ಮತ್ತು ತಾಯಿಯ ಮಹತ್ವಾಕಾಂಕ್ಷೆಯ ನಡುವಿನ ಸಂಘರ್ಷ, ಸ್ಲಿಮ್ ಆಗುವ ಒತ್ತಡ, ಹಾರ್ಮೋನುಗಳ ಬದಲಾವಣೆ, ಮಾನಸಿಕ ತಲ್ಲಣ ಹಾಗೂ ಅದರ ಪರಿಣಾಮಗಳು ಕಥೆಗೆ ತಿರುವು ನೀಡುತ್ತವೆ. ಪೋಷಕರ ಅತಿಯಾದ ನಿರೀಕ್ಷೆ, ಅಂಧಭಕ್ತಿ, ಬಡತನ ಮತ್ತು ಬಾಲ್ಯದ ಹಕ್ಕುಗಳ ನಡುವಿನ ಸಂಘರ್ಷವನ್ನು ಚಿತ್ರ ಪರಿಣಾಮಕಾರಿಯಾಗಿ ಅನಾವರಣಗೊಳಿಸಿದ್ದು, ಮಕ್ಕಳ ಕನಸುಗಳನ್ನು ಹಾಳು ಮಾಡಬಾರದು; ಮಾಡಿದರೆ ಅದರ ಪರಿಣಾಮ ಭೀಕರವಾಗಬಹುದು ಎಂಬ ಸಂದೇಶವನ್ನು ಸಾರುತ್ತದೆ. ಚಿತ್ರದಲ್ಲಿ ಛಾಯಾರಾಣಿ, ಧನಲಕ್ಷ್ಮಿ, ರಂಗನಾಥ ನಂಜನಗೂಡು, ಮಣಿಕಂಠ ಸೂರ್ಯ, ಸುಕುಮಾರ, ಪ್ರೀತಿ ಎಸ್. ಬಾಬು, ಕಾವೇರಿ ಶ್ರೀಧರ್, ವೀರೇಂದ್ರ ಬೆಳ್ಳಿಚುಕ್ಕಿ ಹಾಗೂ ಕಾಳಿಪ್ರಸಾದ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ವಿನಾಯಕ ರೇವಡಿ ಅವರ ಛಾಯಾಗ್ರಹಣ, ಶಿವಸತ್ಯ ಸಂಗೀತ, ಕೃಷ್ಣಪ್ರಸಾದ ಹಳೇಬೀಡು ಸಂಭಾಷಣೆ, ಪೂರ್ಣೇಶ ಸಾಗರ ಚಿತ್ರಕಥೆ, ವೀರೇಂದ್ರ ಬೆಳ್ಳಿಚುಕ್ಕಿ ವಸ್ತ್ರವಿನ್ಯಾಸ, ಮುತ್ತುರಾಜ ಟಿ. ಸಂಕಲನ, ಸಚಿನ್ ಕಲರಿಂಗ್ ನಿರ್ವಹಿಸಿದ್ದಾರೆ. ಕಾಳಿಪ್ರಸಾದ್ ಕಥೆ, ಸಾಹಿತ್ಯ ಹಾಗೂ ನಿರ್ದೇಶನ ಮಾಡಿದ್ದು, ಮಾರುತಿ ಎಂ. ಸಹ ನಿರ್ಮಾಪಕರಾಗಿ, ವೀಣಾ ಎಂ. ನಿರ್ಮಾಪಕರಾಗಿ ಚಿತ್ರವನ್ನು ನಿರ್ಮಿಸಿದ್ದಾರೆ.

ಕುಟುಂಬ ಸಮೇತ ವೀಕ್ಷಿಸಬಹುದಾದ ಈ ಚಿತ್ರ, ಮಕ್ಕಳ ಭಾವನೆ, ಬಾಲ್ಯದ ಸ್ವಾಯತ್ತತೆ ಹಾಗೂ ಪೋಷಕರ ಜವಾಬ್ದಾರಿಯ ಕುರಿತು ಸಮಾಜದಲ್ಲಿ ಚಿಂತನೆ ಮೂಡಿಸುವ ಪ್ರಯತ್ನ ಮಾಡಿದೆ.

## ಇಂದು ಪೂರ್ವಭಾವಿ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**


ಸರ್ಕಾರದ ಆದೇಶದಂತೆ ಜುಲೈ 29ರಂದು ಆಚರಿಸಲಾಗುವ ಶ್ರೀ ಹಡಪದ ಅಪ್ಪಣ್ಣನವರ ಜಯಂತಿ ಅಂಗವಾಗಿ ಜುಲೈ 16ರಂದು (ಗುರುವಾರ) ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ. ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಜಯಂತಿ ಕಾರ್ಯಕ್ರಮದ ರೂಪುರೇಷೆ ಕುರಿತು ಚರ್ಚೆ ನಡೆಸಲಾಗುವುದು. ಸಂಬಂಧಿತ ಸಮುದಾಯದ ಮುಖಂಡರು, ಸಾರ್ವಜನಿಕರು ಹಾಗೂ ಆಸಕ್ತರು ಸಭೆಯಲ್ಲಿ ಭಾಗವಹಿಸಿ ತಮ್ಮ ಸಲಹೆ-ಸೂಚನೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಗದಗ ಜಿಲ್ಲೆಯನ್ನು ಕೂಡಲೇ ಬರಪೀಡಿತ ಪ್ರದೇಶ ಎಂದು ಘೋಷಿಸಿ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಬಿಜೆಪಿ ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಳೆಯ ಕೊರತೆಯಿಂದ ಬೆಳೆಗಳು ಒಣಗುತ್ತಿದ್ದು, ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಹವಾಮಾನ ವೈಪರೀತ್ಯ, ಅಸಮರ್ಪಕ ಮಳೆ, ಬೆಳೆಹಾನಿ, ಇಳುವರಿ



ಕುಸಿತ ಹಾಗೂ ಮಾರುಕಟ್ಟೆ ದರದ ಏರಿಳಿತದಿಂದ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದ್ದಾರೆ.

ಸರ್ಕಾರ ಪರಿಸ್ಥಿತಿಯ ಗಂಭೀರತೆಯನ್ನು ಅರಿತು ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರಿಗೆ ಪರಿಹಾರ, ಅಗತ್ಯ ನೆರವು ಹಾಗೂ ವಿಶೇಷ ಪ್ಯಾಕೇಜ್ ಘೋಷಿಸುವ ಮೂಲಕ ಅವರ ಹಿತಾಸಕ್ತಿಯನ್ನು ಕಾಪಾಡಬೇಕು ಎಂದು ಬೂದಪ್ಪ ಹಳ್ಳಿ ಒತ್ತಾಯಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಗದುಗಿನ ಸುವರ್ಣಾ ಮದರಿಮಠಗೆ ನಾರೀ ಸಮ್ಮಾನ್-2026 ಗೌರವ



**ವಿಜಯಸಾಕ್ಷಿ ಸುದ್ದಿ, ಗದಗ**

ಉದ್ಯಮ ಹಾಗೂ ಸಮಾಜಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ಗಮನಾರ್ಹ ಸೇವೆಯನ್ನು ಗುರುತಿಸಿ ಗದುಗಿನ ಮಹಿಳಾ ಸಾಧಕಿ ಶ್ರೀಮತಿ ಸುವರ್ಣಾ ಎಸ್. ಮದರಿಮಠ ಅವರಿಗೆ ಪ್ರತಿಷ್ಠಿತ ಟನಾರೀ ಸಮ್ಮಾನ್-2026ಟ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಮೀಡಿಯಾ ವಿಷನ್ ಬೆಂಗಳೂರು ಸಂಸ್ಥೆ, ಝೀ ಕನ್ನಡ ನ್ಯೂಸ್ ಮಾಧ್ಯಮ ಸಹಭಾಗಿತ್ವದಲ್ಲಿ ಬೆಂಗಳೂರಿನ ರೆಸಿಡೆನ್ಸಿ ರಸ್ತೆಯ ದಿ ಚಾನ್ಸರಿ ಪೆವಿಲಿಯನ್ ಸಭಾಂಗಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 14 ಮಹಿಳಾ ಸಾಧಕಿಯರೊಂದಿಗೆ ಸುವರ್ಣಾ ಮದರಿಮಠ ಅವರಿಗೂ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯೆ ಪ್ರಭಾ ಮಲ್ಲಿಕಾರ್ಜುನ್, ಕೆಪಿಸಿಸಿ ಮಹಿಳಾ ವಿಭಾಗದ ಅಧ್ಯಕ್ಷೆ ಸೌಮ್ಯಾ ರೆಡ್ಡಿ, ಶಾಸಕ ಟಿ.ಎ. ಶರವಣ ಹಾಗೂ ಚಲನಚಿತ್ರ ನಟ ಅನಿರುದ್ಧ ಜತಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿದ ಗಣ್ಯರು, ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ಸಾಧಿಸುತ್ತಿರುವ ಯಶಸ್ಸು ಸಮಾಜಕ್ಕೆ ಪ್ರೇರಣೆಯಾಗಿದ್ದು, ಇಂತಹ ಸಾಧಕರನ್ನು ಗುರುತಿಸಿ ಗೌರವಿಸುವುದು ಹೆಮ್ಮೆಯ ಸಂಗತಿ ಎಂದು ಅಭಿಪ್ರಾಯಪಟ್ಟರು.

ಸಮಾಜಮುಖಿ ಕಾರ್ಯ, ನಾಯಕತ್ವ ಹಾಗೂ ಸಮಾಜದ ಅಭಿವೃದ್ಧಿಗೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಸುವರ್ಣಾ ಮದರಿಮಠ ಅವರನ್ನು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಆಯೋಜಕರು ತಿಳಿಸಿದರು.

ಪ್ರಶಸ್ತಿ ಪಡೆದ ಸುವರ್ಣಾ ಮದರಿಮಠ ಅವರನ್ನು ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಗಣ್ಯರು ಹಾಗೂ ಅಭಿಮಾನಿಗಳು ಅಭಿನಂದಿಸಿದ್ದಾರೆ.

# ಎನ್‌ಸಿಸಿ ಬದುಕಿನ ಶಿಸ್ತು ಕಲಿಸುವ ವೇದಿಕೆ: ಮೇಜರ್ ಬಿ.ಎಸ್. ರಾಠೋಡ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಗುರಿಯನ್ನು ಹೊಂದಿ, ಅದನ್ನು ಸಾಧಿಸಲು ನಿರಂತರ ಪರಿಶ್ರಮ ಪಡಬೇಕು ಎಂದು ವಿದ್ಯಾದಾನ ಸಮಿತಿ ಪದವಿ ಪೂರ್ವ ಹೆಣ್ಣುಮಕ್ಕಳ ಮಹಾವಿದ್ಯಾಲಯದ ಪ್ರಾಚಾರ್ಯ ಮೇಜರ್ ಬಿ.ಎಸ್. ರಾಠೋಡ ಹೇಳಿದರು. ನಗರದ ವಿದ್ಯಾದಾನ ಸಮಿತಿ ಪದವಿ ಪೂರ್ವ ಹೆಣ್ಣುಮಕ್ಕಳ ಮಹಾವಿದ್ಯಾಲಯದಲ್ಲಿ ಸೋಮವಾರ ನಡೆದ ಎನ್‌ಸಿಸಿ ವಿದ್ಯಾರ್ಥಿನಿಯರ ಆಯ್ಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಉತ್ತಮ ವಿದ್ಯಾಭ್ಯಾಸದೊಂದಿಗೆ ಶಿಸ್ತು, ಸಮಯಪ್ರಜ್ಞೆ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡು ಪೋಷಕರು ಮತ್ತು ಶಿಕ್ಷಣ ಸಂಸ್ಥೆಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು. ಹವಾಲ್ದಾರ್ ದಾವಲ್ ಸಾಬ್ ಹಳ್ಳಿಕೇರಿ ಮಾತನಾಡಿ, ವಿದ್ಯಾದಾನ ಸಮಿತಿಯಲ್ಲಿ ಕಲಿತವರೇ ಇಂದು 38ನೇ ಎನ್‌ಸಿಸಿ ಬೆಟಾಲಿಯನ್ನಲ್ಲಿ ಸೇವೆ ಸಲ್ಲಿಸುತ್ತಿದ್ದು, ತಾವು ಕಲಿತ ಕಾಲೇಜಿನಲ್ಲಿಯೇ ವಿದ್ಯಾರ್ಥಿನಿಯರ ಆಯ್ಕೆ ನಡೆಸುತ್ತಿರುವುದು ಸಂತಸದ ಸಂಗತಿಯಾಗಿದೆ. ಕಠಿಣ ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಗುರಿಯತ್ತ ಸಾಗಿದರೆ ಯಶಸ್ಸು ಖಚಿತ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಹವಾಲ್ದಾರ್ ಬಸವರಾಜ ಓರಾಳೆ, ಸಂದೀಪ್ ಪವಾರ, ಮೀನಾಕ್ಷಿ ಬೆಳವಡಿ, ದೈಹಿಕ ಶಿಕ್ಷಣ ಶಿಕ್ಷಕಿ ಅಶ್ವಿನಿ ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

# 21 ವರ್ಷದ ಯುವತಿ ನಾಪತ್ತೆ: ಪತ್ತೆಗೆ ಸಾರ್ವಜನಿಕರ ಸಹಕಾರ ಕೋರಿದ ಪೊಲೀಸರು

**ವಿಜಯಸಾಕ್ಷಿ ಸುದ್ದಿ,ಬೆಟಗೇರಿ**

ಬಹಿರ್ದೆಸೆಗೆಂದು ಮನೆಯಿಂದ ತೆರಳಿದ್ದ 21 ವರ್ಷದ ಯುವತಿಯೊಬ್ಬಳು ನಾಪತ್ತೆಯಾಗಿರುವ ಘಟನೆ ಬೆಟಗೇರಿ ಪೊಲೀಸ್ ಠಾಣೆ



ವ್ಯಾಪ್ತಿಯಲ್ಲಿ ನಡೆದಿದೆ. ಬೆಟಗೇರಿ ಹರಿಜನಕೇರಿಯ ನಿವಾಸಿ ಕಾವ್ಯಾ ತಂದೆ ಪಂಚಾಕ್ಷರಿ ದೊಡ್ಡಮನಿ (21) ಜುಲೈ 11ರಂದು ಮಧ್ಯಾಹ್ನ 12 ಗಂಟೆ ಸುಮಾರಿಗೆ ಬಹಿರ್ದೆಸೆಗೆಂದು ಮನೆಯಿಂದ ತೆರಳಿದ್ದು, ಬಳಿಕ ಮನೆಗೆ ವಾಪಸ್ ಆಗಿಲ್ಲ. ಸಂಬಂಧಿಕರು ಎಲ್ಲೆಡೆ ಹುಡುಕಾಟ ನಡೆಸಿದರೂ ಯಾವುದೇ ಸುಳಿವು ಸಿಗದ ಹಿನ್ನೆಲೆಯಲ್ಲಿ ತಾಯಿ ಸುಶೀಲಾ ಪಂಚಾಕ್ಷರಿ ದೊಡ್ಡಮನಿ ನೀಡಿದ ದೂರಿನ ಮೇರೆಗೆ ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಗುನ್ನಾ ಸಂಖ್ಯೆ 67/2026ರ ಅಡಿಯಲ್ಲಿ ಮಹಿಳೆ ಕಾಣೆ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಕಾವ್ಯಾ ಸುಮಾರು 5 ಅಡಿ 4 ಇಂಚು ಎತ್ತರ ಹೊಂದಿದ್ದು, ಸಾಧಾರಣ ಮೈಕಟ್ಟು, ಕೆಂಪು ಮೈಬಣ್ಣ, ಕೋಲುಮುಖ, ನೆಟ್ಟನೆಯ ಮೂಗು, ಕಪ್ಪು ಕಣ್ಣು ಹಾಗೂ ಉದ್ದನೆಯ ಕಪ್ಪು ಕೂದಲು ಹೊಂದಿದ್ದಾಳೆ. ಎಡ ಮುಂಗೈ ಮೇಲೆ ಹಳೆಯ ಗಾಯದ ಕಲೆ ಮತ್ತು ಎಡಗಾಲಿನ ಪಾದದ ಮೇಲೆ ಸುಟ್ಟ ಗಾಯದ ಕಲೆ ಗುರುತಾಗಿ ಇದೆ. ಮನೆಯಿಂದ ಹೊರಡುವಾಗ ಕೆಂಪು ಬಣ್ಣದ ಲಾಂಗ್ ಚೂಡಿದಾರ ಧರಿಸಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ. ಯುವತಿಯ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಸಮೀಪದ ಪೊಲೀಸ್ ಠಾಣೆ ಅಥವಾ ಬೆಟಗೇರಿ ಪೊಲೀಸ್ ಠಾಣೆ (ದೂ. 08372-246333), ಪಿಎಸ್‌ಐ ಮೊ. 9480804449 ಅಥವಾ ಗದಗ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ (08372-238300 / 9480804400)ಗೆ ಮಾಹಿತಿ ನೀಡುವಂತೆ ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

### ಕೆಇಬಿ ಕಚೇರಿ ಎದುರು ರೈತರ ಆಕ್ರೋಶ | ಸಮಸ್ಯೆ ಬಗೆಹರಿಸುವುದಾಗಿ ಅಧಿಕಾರಿಗಳ ಭರವಸೆ

# ಬೆಳೆ ಉಳಿಸಬೇಕಾದರೆ ವಿದ್ಯುತ್ ಕೊಡಿ!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡಬೇಕೆಂದು ಆಗ್ರಹಿಸಿ ಸಮೀಪದ ಅಬ್ಬಿಗೇರಿ ಗ್ರಾಮದ ರೈತರು ಮಂಗಳವಾರ ನರೇಗಲ್ಲ ಕೆಇಬಿ ಗ್ರಿಡ್ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಕೆಇಬಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ ರೈತರಿಗೆ ಗ್ರಾಮಸ್ಥರೂ ಬೆಂಬಲ ಸೂಚಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ರೈತ ಮುಖಂಡ ಸಂಗಪ್ಪ ಕುಂಬಾರ, ಸರ್ಕಾರ ರೈತರಿಗೆ ಏಳು ತಾಸು ಉಚಿತ ವಿದ್ಯುತ್ ನೀಡುವ ಯೋಜನೆ ಜಾರಿಗೆ ತಂದಿದ್ದರೂ, ಅದು ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ. ವಿದ್ಯುತ್ ಪೂರೈಕೆಯಲ್ಲಿ ಆಗಾಗ ವ್ಯತ್ಯಯ ಉಂಟಾಗುತ್ತಿರುವುದರಿಂದ ಬೆಳೆಗಳಿಗೆ ನೀರುಣಿಸಲು ಸಾಧ್ಯವಾಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಮಳೆಯ ಕೊರತೆ ಎದುರಾಗಿರುವ



ಸಂದರ್ಭದಲ್ಲಿ ಪಂಪ್‌ಸೆಟ್‌ಗಳಿಗೆ ನಿರಂತರವಾಗಿ ತ್ರಿಫೇಸ್ ವಿದ್ಯುತ್ ಪೂರೈಕೆ ಅತ್ಯಗತ್ಯವಾಗಿದೆ. ಆದರೆ ಅಗತ್ಯ ಪ್ರಮಾಣದಲ್ಲಿ ವಿದ್ಯುತ್ ಸಿಗದ ಕಾರಣ ಕೃಷಿ ಚಟುವಟಿಕೆಗಳಿಗೆ ತೀವ್ರ ಅಡಚಣೆ ಉಂಟಾಗುತ್ತಿದೆ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದರು.

ಮುಖಂಡ ಬಸವರಾಜ ತಳವಾರ ಮಾತನಾಡಿ, ಬರದ ಪರಿಸ್ಥಿತಿಯಲ್ಲಿ ರೈತರ ನೆರವಿಗೆ ಸರ್ಕಾರ ಮತ್ತು ಕೆಇಬಿ ಇಲಾಖೆ ಧಾವಿಸಬೇಕು. ಕನಿಷ್ಠ ಏಳು ತಾಸು ನಿರಂತರ ತ್ರಿಫೇಸ್ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆ ಸ್ಥಳಕ್ಕೆ ಆಗಮಿಸಿದ ಕೆಇಬಿ ಸೆಕ್ಷನ್ ಅಧಿಕಾರಿ ವಿರೂಪಾಕ್ಷ ಸರ್ವಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕೊಚ್ಚಿ ಹಾಗೂ ಕಾರ್ಯನಿರ್ವಾಹಕ ಅಭಿಯಂತರ ರಾಜೂರ ರೈತರ ಅಹವಾಲು ಆಲಿಸಿ, ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ

> **ಸರ್ಕಾರ ಏಳು ತಾಸು ಉಚಿತ ವಿದ್ಯುತ್ ನೀಡುವುದಾಗಿ ಘೋಷಿಸಿದ್ದರೂ ರೈತರಿಗೆ ಸಮರ್ಪಕ ವಿದ್ಯುತ್ ಸಿಗುತ್ತಿಲ್ಲ. ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಕೂಡಲೇ ನಿರಂತರ ತ್ರಿಫೇಸ್ ವಿದ್ಯುತ್ ಪೂರೈಕೆ ಕಲ್ಪಿಸಬೇಕು.**
> - **ಸಂಗಪ್ಪ ಕುಂಬಾರ,** ರೈತ ಮುಖಂಡ

ಭರವಸೆ ನೀಡಿದರು. ಅಧಿಕಾರಿಗಳ ಭರವಸೆಯ ಬಳಿಕ ರೈತರು ಪ್ರತಿಭಟನೆಯನ್ನು ಹಿಂಪಡೆದರು.

ಪ್ರತಿಭಟನೆಯಲ್ಲಿ ಸುರೇಶ ನಾಯ್ಕರ್, ಶಿವಕುಮಾರ ಮಲ್ಲಾಪೂರ, ಶಿದ್ದಪ್ಪ ಹನಮನಾಳ, ರವಿ ಯತ್ನಟ್ಟಿ, ಮಂಜುನಾಥ ಡಂಬಳ, ಗಣೇಶ ಬಂಡಿವಡ್ಡರ, ದೇವಪ್ಪ ಜಂತ್ಲಿ, ರಮೇಶ ಬಸವರಡ್ಡೇರ, ಉಮೇಶ ಹೊಸಮನಿ, ದೇವೇಂದ್ರ, ಮುನೆನಕೊಪ್ಪ, ಪ್ರಮೋದ ಅಣ್ಣಿಗೇರಿ, ದೇವರಾಜ ಉಪಾಧ್ಯ ಸೇರಿದಂತೆ ಅನೇಕ ರೈತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಎಸ್‌ಎಸ್‌ಎಲ್‌ಸಿ ಸಾಧಕರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ಸಿದ್ದಲಿಂಗನಗರ ಸರ್ಕಾರಿ ಪ್ರೌಢಶಾಲೆಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪರೀಕ್ಷೆಯಲ್ಲಿ ಶಾಲೆಗೆ ಭೂಮಿಕಾ ಶೇಣ್ವಿ ಪ್ರಥಮ, ಉಮಾಮಹೇಶ್ವರಿ ಬುಕ್ಕಸಾಗರಮಠ ದ್ವಿತೀಯ ಹಾಗೂ ಮೇಹಕ್ ಇಲ್ಲಾಳ ತೃತೀಯ ಸ್ಥಾನ ಪಡೆದು ಶಾಲೆಯ ಕೀರ್ತಿ ಹೆಚ್ಚಿಸಿದರು. ಸಾಧಕ ವಿದ್ಯಾರ್ಥಿನಿಯರನ್ನು ಗಣ್ಯರು ಅಭಿನಂದಿಸಿ, ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ, ಡಾ. ಬಸವರಾಜ ಧಾರವಾಡ, ಎಸ್.ಎಸ್. ಪಟ್ಟಣಶೆಟ್ಟಿ, ವಿದ್ಯಾವತಿ ಗಡಗಿ, ಎಂ.ಎಚ್. ಕಂಬಳಿ, ಶಂಕರ ಹಡಗಲಿ, ಐ.ಬಿ. ಬೆನಕಪ್ಪ, ಜಿ.ಎಂ. ಮುಂದಿನಮನಿ, ವಿ.ವಿ. ನಡುವಿನಮನಿ, ಬಿ.ಎಫ್. ಪೂಜಾರ, ಶರಣಪ್ಪ ನಾಗರಹಳ್ಳಿ, ಜಯಲಕ್ಷ್ಮಿ ಅಣ್ಣಿಗೇರಿ, ದತ್ತ ಪ್ರಸನ್ನ ಪಾಟೀಲ್, ಪ್ರಕಾಶ ಶೇಣ್ವಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

### ಮಾಗಡಿಯಲ್ಲಿ ಹತ್ತಿ ಉತ್ಪಾದಕತೆ ಅಭಿಯಾನ | ರೈತರಿಗೆ ಆಧುನಿಕ ಬೆಳೆ ನಿರ್ವಹಣೆ ಕುರಿತು ತಜ್ಞರ ಮಾರ್ಗದರ್ಶನ

# ಹತ್ತಿ ಇಳುವರಿ ಹೆಚ್ಚಿಸಲು ವೈಜ್ಞಾನಿಕ ಕೃಷಿಯೇ ಮಂತ್ರ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮಾಗಡಿ ಗ್ರಾಮದಲ್ಲಿ ಧಾರವಾಡ ಹತ್ತಿ ಸಂಶೋಧನಾ ಕೇಂದ್ರ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಮಂಗಳವಾರ ಹತ್ತಿ ಬೆಳೆ ಉತ್ಪಾದಕತೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಹತ್ತಿ ಬೆಳೆಯ ವೈಜ್ಞಾನಿಕ ನಿರ್ವಹಣೆ, ಆಧುನಿಕ ಕೃಷಿ ತಂತ್ರಜ್ಞಾನ ಹಾಗೂ ಉತ್ಪಾದಕತೆ ಹೆಚ್ಚಿಸುವ ವಿಧಾನಗಳ ಕುರಿತು ಸಮಗ್ರ ಮಾಹಿತಿ ನೀಡಲಾಯಿತು. ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿ, ಉತ್ತಮ ಗುಣಮಟ್ಟದ ಬೀಜಗಳ ಆಯ್ಕೆ, ಸಮಯೋಚಿತ ಬಿತ್ತನೆ, ಮಣ್ಣು ಪರೀಕ್ಷೆ ಆಧಾರಿತ ಗೊಬ್ಬರ ಬಳಕೆ, ಸಮರ್ಪಕ ನೀರಿನ ನಿರ್ವಹಣೆ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅನುಸರಿಸಿದರೆ ಹತ್ತಿ ಉತ್ಪಾದನೆ ಮತ್ತು ಉತ್ಪಾದಕತೆ ಹೆಚ್ಚಿಸಬಹುದು ಎಂದು ತಿಳಿಸಿದರು. ಹತ್ತಿ ಬೆಳೆಗೆ ಕಂಟಕವಾಗಿರುವ ಗುಲಾಬಿ ಕಾಯಿಕೊರಕ ಬಾಧೆ ನಿಯಂತ್ರಣ ಕ್ರಮಗಳ ಬಗ್ಗೆಯೂ ವಿವರಿಸಿದರು.

ಧಾರವಾಡ ಹತ್ತಿ ಸಂಶೋಧನಾ ಕೇಂದ್ರದ ಸಸ್ಯ ಕೀಟಶಾಸ್ತ್ರ ವಿಜ್ಞಾನಿಗಳಾದ ಡಾ. ವಿ.ಕೆ. ಶಾನವಾಡ, ಡಾ. ಸುನೀಲ ಕರೀಕಟ್ಟಿ ಹಾಗೂ ಪೂರ್ಣಿಮಾ ಮಟ್ಟಿ ಮಾತನಾಡಿ, ಆರಂಭಿಕ ಹಂತದಿಂದಲೇ ಕೀಟ ಮತ್ತು ರೋಗಗಳ ಮೇಲ್ವಿಚಾರಣೆ ನಡೆಸಬೇಕು. ಗುಲಾಬಿ ಕಾಯಿಕೊರಕ, ಹಸಿರು ಎಲೆಹುಳು, ಬಿಳಿನೊಣ ಸೇರಿದಂತೆ ಪ್ರಮುಖ ಕೀಟಗಳ ನಿಯಂತ್ರಣಕ್ಕೆ ಮೋಹಕ ಬಲೆ ಹಾಗೂ ಸಮಗ್ರ ಕೀಟ

> **ವೈಜ್ಞಾನಿಕ ಕೃಷಿ ಪದ್ಧತಿ ಹಾಗೂ ಸಮಗ್ರ ಕೀಟ ನಿರ್ವಹಣೆಯನ್ನು ಅಳವಡಿಸಿಕೊಂಡರೆ ಹತ್ತಿ ಬೆಳೆಯಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯ.**
> - **ಚೇತನಾ ಪಾಟೀಲ,** ಜಂಟಿ ಕೃಷಿ ನಿರ್ದೇಶಕಿ

ನಿರ್ವಹಣಾ ಕ್ರಮಗಳನ್ನು ಅನುಸರಿಸುವಂತೆ ಸಲಹೆ ನೀಡಿದರು. ಕೃಷಿ ಉಪನಿರ್ದೇಶಕಿ ಸ್ಫೂರ್ತಿ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದಲ್ಲಿ ಜಾರಿಯಲ್ಲಿರುವ ಈ ಅಭಿಯಾನದ ಉದ್ದೇಶ ಪ್ರತಿ ಎಕರೆಗೆ ಹತ್ತಿ ಉತ್ಪಾದನೆ ಹೆಚ್ಚಿಸುವುದು, ರೈತರಿಗೆ ಆಧುನಿಕ ಕೃಷಿ ತಂತ್ರಜ್ಞಾನ ಪರಿಚಯಿಸುವುದು ಹಾಗೂ ಉತ್ಪಾದನಾ ವೆಚ್ಚ ಕಡಿಮೆ ಮಾಡಿ ಆದಾಯ ಹೆಚ್ಚಿಸುವುದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹತ್ತಿ ಬೆಳೆಗಾರ ಚನ್ನಪ್ಪ ಷಣ್ಮುಕಿ ಸೇರಿದಂತೆ ರೈತರು ತಜ್ಞರೊಂದಿಗೆ ಸಂವಾದ ನಡೆಸಿ ತಮ್ಮ ಸಂದೇಹಗಳಿಗೆ ಪರಿಹಾರ ಪಡೆದರು. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವೀರಯ್ಯ ಮಠಪತಿ ಅಧ್ಯಕ್ಷತೆ ವಹಿಸಿದ್ದರು. ಕೃಷಿ ಇಲಾಖೆ ಅಧಿಕಾರಿಗಳಾದ ಶಿವಕುಮಾರ ಕಾಶಪ್ಪನವರ, ರೈತ ಮುಖಂಡರಾದ ಚಂದ್ರಶೇಖರ ಬಿ.ಟಿ., ಬಸವರಾಜ ಪಲ್ಲೇದ, ಉಡಚಪ್ಪ ಕೆ., ನಾಗರಾಜ ಕುಲಕರ್ಣಿ, ಕಸ್ತೂರೆಮ್ಮ ಎಸ್., ಸಾವಿತ್ರಿ ಪಾಳೇದ, ಗೀತಾ ಹೂಗಾರ, ಶ್ರುವಿಕಾ ಭಾನು, ಆತ್ಮ ಯೋಜನೆ ಸಿಬ್ಬಂದಿ, ಪ್ರಗತಿಪರ ರೈತರು ಹಾಗೂ ಮಾಗಡಿ ಗ್ರಾಮದ ಹತ್ತಿ ಬೆಳೆಗಾರರು ಭಾಗವಹಿಸಿದ್ದರು.

### ಮಣ್ಣಿನ ಎತ್ತುಗಳ ಖರೀದಿಗೆ ಮುಗಿಬಿದ್ದ ಜನರು | ಪರಿಸರ ಸ್ನೇಹಿ ಮೂರ್ತಿಗಳಿಗೆ ಭಾರೀ ಬೇಡಿಕೆ

# ಬರದ ಬೇಗೆಯಲ್ಲೂ ಮಣ್ಣೆತ್ತಿನ ಹಬ್ಬದ ಸಡಗರ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬರದ ಛಾಯೆ ಆವರಿಸಿದ್ದರೂ ರೈತ ಸಮುದಾಯದ ಸಾಂಪ್ರದಾಯಿಕ ಮಣ್ಣೆತ್ತಿನ ಅಮಾವಾಸ್ಯೆ ಹಬ್ಬವನ್ನು ಪಟ್ಟಣದಲ್ಲಿ ಬುಧವಾರ ಸಂಭ್ರಮ-ಸಡಗರದಿಂದ ಆಚರಿಸಲಾಯಿತು. ಹಬ್ಬದ ಅಂಗವಾಗಿ ಪೇಟೆ ಆಂಜನೇಯ ದೇವಸ್ಥಾನದ ಆವರಣದಲ್ಲಿ ಕಳೆದ ಎರಡು ದಿನಗಳಿಂದ ಮಣ್ಣಿನ ಎತ್ತುಗಳ ಮೂರ್ತಿಗಳ ಖರೀದಿ ಭರಾಟೆ ಜೋರಾಗಿತ್ತು.

ಬೆಳಗ್ಗೆಯಿಂದಲೇ ಕುಟುಂಬ ಸಮೇತರಾಗಿ ಆಗಮಿಸಿದ ಸಾರ್ವಜನಿಕರು ವಿವಿಧ ಗಾತ್ರ ಹಾಗೂ ಬಣ್ಣಬಣ್ಣದ ಮಣ್ಣೆತ್ತಿನ ಮೂರ್ತಿಗಳನ್ನು ಖರೀದಿಸಿದರು. ಲಕ್ಷ್ಮೇಶ್ವರದ ಕುಂಬಾರರ ಕುಟುಂಬಗಳು ತಯಾರಿಸಿದ ಮಣ್ಣಿನ ಎತ್ತುಗಳಿಗೆ ರಾಜ್ಯದ ವಿವಿಧ ಭಾಗಗಳಿಂದಲೂ ಬೇಡಿಕೆ ಇರುವುದರಿಂದ ಹಬ್ಬಕ್ಕೂ ಮುನ್ನವೇ ಹೆಚ್ಚಿನ ಪ್ರಮಾಣದಲ್ಲಿ ಸಗಟು ಮಾರಾಟ ನಡೆದಿತ್ತು.

ಈ ವರ್ಷ ಮಣ್ಣೆತ್ತಿನ ಮೂರ್ತಿಗಳ ಬೆಲೆಯಲ್ಲೂ ಏರಿಕೆ ಕಂಡುಬಂದಿದೆ. ಹಿಂದೆ ₹20ಕ್ಕೆ ಸಿಗುತ್ತಿದ್ದ ಸಣ್ಣ ಮೂರ್ತಿಗಳು ಈಗ ₹50ಕ್ಕಿಂತ ಹೆಚ್ಚು ಬೆಲೆಗೆ ಮಾರಾಟವಾದವು. ₹50ರಿಂದ ₹1,000ರವರೆಗೆ ವಿವಿಧ ಮಾದರಿಯ ಮೂರ್ತಿಗಳು ಲಭ್ಯವಿದ್ದರೆ, ವಿಶೇಷ ಅಲಂಕಾರದ ದೊಡ್ಡ ಮೂರ್ತಿಗಳು ₹2,000ರವರೆಗೆ ಮಾರಾಟವಾದವು. ವಿಶೇಷವಾಗಿ ರಾಸಾಯನಿಕ ಬಣ್ಣಗಳ ಬದಲಿಗೆ ಪರಿಸರ ಸ್ನೇಹಿ ಬಣ್ಣಗಳಿಂದ ತಯಾರಿಸಿದ ಮಣ್ಣಿನ ಎತ್ತುಗಳಿಗೆ ಈ ಬಾರಿ ಹೆಚ್ಚು ಬೇಡಿಕೆ ಕಂಡುಬಂದಿದ್ದು, ಇಷ್ಟದ ಮೂರ್ತಿಗಳನ್ನು



ಖರೀದಿಸಲು ಗ್ರಾಹಕರ ನಡುವೆ ಪೈಪೋಟಿಯೂ ಕಂಡುಬಂತು.

ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ರೈತರು ಮಾತ್ರವಲ್ಲದೆ ಪಟ್ಟಣದ ಅನೇಕ ಕುಟುಂಬಗಳು ಮಣ್ಣಿನ ಎತ್ತುಗಳನ್ನು ಮನೆಗೆ ಕೊಂಡೊಯ್ದು ವಿಶೇಷ ಪೂಜೆ ಸಲ್ಲಿಸಿ ಸಂಪ್ರದಾಯಬದ್ಧವಾಗಿ ಹಬ್ಬ ಆಚರಿಸಿದರು. ಕೃಷಿ ಬದುಕಿನ ಅವಿಭಾಜ್ಯ ಅಂಗವಾದ ಎತ್ತುಗಳಿಗೆ ಕೃತಜ್ಞತೆ ಸಲ್ಲಿಸುವ ಸಂಸ್ಕೃತಿ ಇಂದಿಗೂ ಜೀವಂತವಾಗಿರುವುದು ಹಬ್ಬದ ವಿಶೇಷತೆಯಾಗಿದೆ.

### ನಾಟಕಗಳು ಮನಸ್ಸು ರೂಪಿಸುತ್ತವೆ, ಸಮಾಜದಲ್ಲಿ ಜಾಗೃತಿ ಮೂಡಿಸುತ್ತವೆ: ತೋಂಟದ ಶ್ರೀಗಳು

# ರಂಗಭೂಮಿ ಸಮಾಜಕ್ಕೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ನಾಡು-ನುಡಿಗೆ ರಂಗಭೂಮಿಯ ಕೊಡುಗೆ ಅಪಾರವಾಗಿದ್ದು, ನಾಟಕಗಳು ಸಮಾಜದ ಸಮಸ್ಯೆಗಳನ್ನು ಜನರ ಮುಂದಿಟ್ಟು ಜಾಗೃತಿ ಮೂಡಿಸುವ ಪರಿಣಾಮಕಾರಿ ಮಾಧ್ಯಮವಾಗಿವೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2806ನೇ ಶಿವಾನುಭವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಮನುಷ್ಯ ಸಮಾಜ ಜೀವಿಯಾಗಿದ್ದು, ಬದುಕಿನ ನೈಜ ಸತ್ಯಗಳನ್ನು ಹಾಗೂ ಸವಾಲುಗಳನ್ನು ನಾಟಕಗಳಂತಹ ರಂಗಪ್ರದರ್ಶನಗಳ ಮೂಲಕ ಪರಿಣಾಮಕಾರಿಯಾಗಿ ಅನಾವರಣಗೊಳಿಸಬಹುದು. ಮನುಷ್ಯನ ಭಾವನೆಗಳ ಅಭಿವ್ಯಕ್ತಿಗೆ ರಂಗಭೂಮಿ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಟರಂಗಭೂಮಿ ಮಹತ್ವಟ ಕುರಿತು ಉಪನ್ಯಾಸ ನೀಡಿದ ಗಣೇಶ ಅಮೀನಗಡದ, ಸಾಹಿತ್ಯ, ಸಂಗೀತ, ನಾಟಕ ಹಾಗೂ ವಚನಗಳು ಮನಸ್ಸಿಗೆ ನೆಮ್ಮದಿ ನೀಡುವುದರ ಜೊತೆಗೆ ಉತ್ತಮ ಜೀವನ ಮೌಲ್ಯಗಳನ್ನು ಬೆಳೆಸುತ್ತವೆ ಎಂದರು. ಗದಗ ನಗರವು ಸಂಗೀತ ಮತ್ತು ರಂಗಭೂಮಿ ಕ್ಷೇತ್ರಕ್ಕೆ ನೀಡಿರುವ ಕೊಡುಗೆ ಅಪಾರವಾಗಿದೆ. ಪಾಲಕರು ಮಕ್ಕಳನ್ನು ಮೊಬೈಲ್‌ನಿಂದ ದೂರವಿಟ್ಟು ಸಾಹಿತ್ಯ, ಸಂಗೀತ ಮತ್ತು ನಾಟಕಗಳತ್ತ ಒಲವು ಬೆಳೆಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮೈಸೂರಿನ ಕವಿತಾ ಕಲಾ ತಂಡದಿಂದ ಟಕೌದಿಟ ನಾಟಕ ಪ್ರದರ್ಶನ ನಡೆಯಿತು.

ಕಾರ್ಯಕ್ರಮದಲ್ಲಿ ಮಾಜಿ ಅಧ್ಯಕ್ಷ ಸಿದ್ಧಣ್ಣ ಬಂಗಾರಶೆಟ್ಟರ ದಂಪತಿ ಹಾಗೂ ರೋಟರಿ ಮತ್ತು ಲಯನ್ಸ್ ಸಂಸ್ಥೆಗಳ ನೂತನ ಅಧ್ಯಕ್ಷರಾದ ಡಾ. ಪಿ.ಎಸ್. ಉಗಲಾಟ (ರೋಟರಿ ಗದಗ-ಬೆಟಗೇರಿ), ಮಲ್ಲಿಕಾರ್ಜುನ ಸಿ. ಚಂದಪ್ಪನವರ (ರೋಟರಿ ಗದಗ ಸೆಂಟ್ರಲ್) ಮತ್ತು ಪ್ರವೀಣ್ ವಾರಕರ (ಲಯನ್ಸ್ ಸಂಸ್ಥೆ, ಗದಗ) ಅವರನ್ನು ಸನ್ಮಾನಿಸಲಾಯಿತು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ಪ್ರಸ್ತುತಪಡಿಸಿದರು. ಧರ್ಮಗ್ರಂಥ ಪಠಣವನ್ನು ದೀಕ್ಷಾ ಸಂಗನಾಯ್ಕರ, ವಚನ ಚಿಂತನವನ್ನು ಪ್ರತೀಕ್ಷಾ ಮಹಾಂತೇಶ ಪೂಜಾರ

> **ಸಮಾಜದಲ್ಲಿರುವ ಸಮಸ್ಯೆಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಶಕ್ತಿಯೇ ರಂಗಭೂಮಿಯದು. ಕನ್ನಡ ನಾಡು-ನುಡಿಯನ್ನು ಶ್ರೀಮಂತಗೊಳಿಸುವಲ್ಲಿ ರಂಗಭೂಮಿಯ ಪಾತ್ರ ಅನನ್ಯವಾಗಿದೆ.**
> - **ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಡಾ. ಜಿ.ಬಿ. ಪಾಟೀಲ ಮತ್ತು ಕುಟುಂಬದವರು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ರಮೇಶ ಕಲ್ಲನಗೌಡರ ಹಾಗೂ ವಿದ್ಯಾ ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಮೈಲಾರಪ್ಪ ಮೆಣಸಗಿ ಕಾಲೇಜಿನಲ್ಲಿ ಕಾಲೇಜು ಸಂಸತ್ ಚುನಾವಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳು, ಚುನಾವಣಾ ಪ್ರಕ್ರಿಯೆಯ ಅರಿವು ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಉದ್ದೇಶದಿಂದ ನಗರದ ಮೈಲಾರಪ್ಪ ಮೆಣಸಗಿ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಕಾಲೇಜು ಸಂಸತ್ (ಕ್ಯಾಬಿನೆಟ್) ಚುನಾವಣೆ ಯಶಸ್ವಿಯಾಗಿ ನಡೆಯಿತು.

ಚುನಾವಣೆಗಾಗಿ ಪ್ರತ್ಯೇಕ ಮತಗಟ್ಟೆ, ಮತಪೆಟ್ಟಿಗೆ ಹಾಗೂ ಮತದಾನದ ವ್ಯವಸ್ಥೆ ಕಲ್ಪಿಸಲಾಗಿತ್ತು. ವಿದ್ಯಾರ್ಥಿಗಳು ಸರದಿಯಲ್ಲಿ ನಿಂತು ರಹಸ್ಯ ಮತದಾನದ ಮೂಲಕ ತಮ್ಮ ನೆಚ್ಚಿನ ಅಭ್ಯರ್ಥಿಗಳಿಗೆ ಮತ ಚಲಾಯಿಸಿದರು. ಪ್ರಾಂಶುಪಾಲರು ಹಾಗೂ ಉಪನ್ಯಾಸಕರು ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಿ, ಸಂಪೂರ್ಣ ಚುನಾವಣಾ ಪ್ರಕ್ರಿಯೆಯನ್ನು ನಿಷ್ಪಕ್ಷಪಾತವಾಗಿ ನಡೆಸಿಕೊಟ್ಟರು.

ಪ್ರಧಾನ ಕಾರ್ಯದರ್ಶಿ ಹುದ್ದೆಗೆ ನಡೆದ ಚುನಾವಣೆಯಲ್ಲಿ ನಿತಿನ್ ಪಪ್ಪಣ್ಣವರ್ ಭರ್ಜರಿ ಬಹುಮತದೊಂದಿಗೆ ಆಯ್ಕೆಯಾದರು. ಕ್ರೀಡಾ ಸಚಿವರಾಗಿ ಸೃಜನ್ ಬಳಿಗೇರ್ ಮತ್ತು ಪಲ್ಲವಿ ಸುನಗಾರ, ಸಾಂಸ್ಕೃತಿಕ ಸಚಿವರಾಗಿ ಹರ್ಷಿತ್ ಎಂ.ಆರ್. ಹಾಗೂ ದಿಶಾ ಹಬೀಬ ಆಯ್ಕೆಯಾದರು.

ಈ ಸಂದರ್ಭದಲ್ಲಿ ಇನ್‌ಸೈಟ್ ಅಕಾಡೆಮಿಯ ಅಧ್ಯಕ್ಷ ಎಸ್.ಜಿ. ಪಾಟೀಲ್ ಮಾತನಾಡಿ, ವಿದ್ಯಾರ್ಥಿಗಳು ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡು ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

### ಸಂಕ್ಷಿಪ್ತ ಸುದ್ದಿಗಳು

## ರೈತನ ಸೋಲಾರ್ ಪ್ಲಾಂಟ್ ಧ್ವಂಸ; ಕಿಡಿಗೇಡಿಗಳ ವಿರುದ್ಧ ಕ್ರಮಕ್ಕೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಮರಬ್ಬಿಹಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಕರಾಳ ತಾಂಡಾದಲ್ಲಿ ರೈತನೊಬ್ಬನ ಹೊಲದಲ್ಲಿದ್ದ ಸೋಲಾರ್ ಪ್ಲಾಂಟ್‌ಗಳನ್ನು ಕಿಡಿಗೇಡಿಗಳು ಕಲ್ಲು ತೂರಿ ಧ್ವಂಸಗೊಳಿಸಿರುವ ಘಟನೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು, ರೈತನಿಗೆ ಉಂಟಾದ ಲಕ್ಷಾಂತರ ರೂಪಾಯಿ ನಷ್ಟವನ್ನು ಭರ್ತಿ ಮಾಡಿಕೊಡಬೇಕು ಎಂದು ಆಗ್ರಹಿಸಿ ಕರುನಾಡ ವಿಜಯ ಸೇನೆ ಪದಾಧಿಕಾರಿಗಳು ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದರು.

ದೂರು ಸಲ್ಲಿಸಿದ ಬಳಿಕ ಮಾತನಾಡಿದ ಕರು ನಾಡ ವಿಜಯ ಸೇನೆ ತಾಲೂಕು ಅಧ್ಯಕ್ಷ ಪ್ರಕಾಶ್ ಆರ್, ನಕರಾಳ ತಾಂಡಾ ಗ್ರಾಮದ ರೈತ ಹಾಗೂ ಸಂಘಟನೆಯ ತಾಲೂಕು ಜಂಟಿ ಕಾರ್ಯದರ್ಶಿ ಪಾಂಡು ನಾಯ್ಕ್ ಎಲ್. ಅವರು ತಮ್ಮ ಹೊಲದಲ್ಲಿ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಸೋಲಾರ್ ಪ್ಲಾಂಟ್ ಅಳವಡಿಸಿಕೊಂಡಿದ್ದರು.

ಆದರೆ, ಹೊಲದ ಪಕ್ಕದಲ್ಲಿರುವ ಮನೆಯೊಂದರಲ್ಲಿ ಕೆಲವರು ಪ್ರತಿನಿತ್ಯ ಅಕ್ರಮವಾಗಿ ಜೂಜಾಟ ನಡೆಸಿ ಮದ್ಯಪಾನ ಮಾಡುತ್ತಿದ್ದು, ಗಲಾಟೆ ವೇಳೆ ಸೋಲಾರ್ ಪ್ಲಾಂಟ್ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ ಎಂದು ಆರೋಪಿಸಿದರು.

**ರೈತನಿಗೆ ಲಕ್ಷಾಂತರ ರೂಪಾಯಿ ನಷ್ಟ:** ಕಲ್ಲು ತೂರಾಟದಿಂದ ಸೋಲಾರ್ ಪ್ಯಾನೆಲ್‌ಗಳು ಸಂಪೂರ್ಣ ಜಖಂಗೊಂಡಿದ್ದು, ರೈತನಿಗೆ ಭಾರೀ ಆರ್ಥಿಕ ನಷ್ಟ ಉಂಟಾಗಿದೆ. ದುಡಿದು ಅಳವಡಿಸಿಕೊಂಡಿದ್ದ ಆಸ್ತಿಯನ್ನು ಧ್ವಂಸಗೊಳಿಸಿರುವ ಕೃತ್ಯ ಖಂಡನೀಯವಾಗಿದೆ ಎಂದು ಕರುನಾಡ ವಿಜಯ ಸೇನೆ ಆಕ್ರೋಶ ವ್ಯಕ್ತಪಡಿಸಿದೆ.

ಜೂಜಾಟ ನಡೆಸಿ ಸಾರ್ವಜನಿಕ ಆಸ್ತಿಗೆ ಹಾನಿ ಉಂಟುಮಾಡಿದ ಕಿಡಿಗೇಡಿಗಳನ್ನು ತಕ್ಷಣ ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು. ಅಲ್ಲದೆ, ರೈತ ಪಾಂಡು ನಾಯ್ಕ್ ಅವರಿಗೆ ಉಂಟಾದ ನಷ್ಟವನ್ನು ತಪ್ಪಿತಸ್ಥರಿಂದಲೇ ವಸೂಲಿ ಮಾಡಿ ಸೋಲಾರ್ ಪ್ಲಾಂಟ್ ಮರುಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಈ ಸಂಬಂಧ ಪೊಲೀಸ್ ಠಾಣೆಯ ಪಿಎಸ್‌ಐ ಉಮಾಪತಿ ನಾಯ್ಕ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಪ್ರಕಾಶ್ ಆರ್, ವಿಶ್ವನಾಥ್ ಹಿಟ್ನಾಳ್, ರಘು ನಾಯ್ಕ್, ಶಿವಕುಮಾರ್ ಎಂ., ಪಾಂಡು ನಾಯ್ಕ್, ಯಶವಂತ್ ಕುಮಾರ್, ಮೋಹನ್ ನಾಯ್ಕ್, ಕಾರ್ತಿಕ್ ಕುಮಾರ್ ಸೇರಿದಂತೆ ಕರುನಾಡ ವಿಜಯ ಸೇನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಆಷಾಢ ಮಾಸದ ಆಧ್ಯಾತ್ಮಿಕ ವೈಭವಕ್ಕೆ ಇಂದಿನಿಂದ ಚಾಲನೆ




**ವಿಜಯಸಾಕ್ಷಿ ಸುದ್ದಿ, ಗದಗ**

ಆಷಾಢ ಮಾಸದ ಅಂಗವಾಗಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ವತಿಯಿಂದ ಜುಲೈ 16ರಿಂದ 21ರವರೆಗೆ ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಠದ ಆವರಣದಲ್ಲಿ ಸಂಗೀತಯುಕ್ತ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಪದಾಧಿಕಾರಿ ಮಂಜುನಾಥ್ ಬೇಲೇರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜುಲೈ 16ರಿಂದ 21ರವರೆಗೆ ಪ್ರತಿದಿನ ಬೆಳಿಗ್ಗೆ 7ರಿಂದ 11 ಗಂಟೆಯವರೆಗೆ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಅವರ ಸಾನ್ನಿಧ್ಯದಲ್ಲಿ ಸಂಗೀತಯುಕ್ತ ಇಷ್ಟಲಿಂಗ ಮಹಾಪೂಜೆ ನಡೆಯಲಿದೆ. ಪ್ರತಿದಿನ ಸಂಜೆ 7ರಿಂದ 9 ಗಂಟೆಯವರೆಗೆ ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಆಧ್ಯಾತ್ಮಿಕ ಪ್ರವಚನ ಏರ್ಪಡಿಸಲಾಗಿದೆ ಎಂದು ಹೇಳಿದರು.

ಜುಲೈ 21ರಂದು ವಿಶೇಷ ಧಾರ್ಮಿಕ ವಿಧಿವಿಧಾನಗಳು, ಜಗದ್ಗುರುಗಳ ಆಶೀರ್ವಚನ ಹಾಗೂ ಸಮಾರೋಪ ಸಮಾರಂಭ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಉಮಾಪತಿ ಬೊಸನೂರಮಠ, ಸುರೇಶ್ ಅಬ್ಬಿಗೇರಿ, ಮಂಜುನಾಥ್ ಚಳಗೇರಿ, ರಾಜಶೇಖರ್ ಮುದೋಳ ಹಾಗೂ ಗುರುಸಿದ್ದಯ್ಯ ಹಿರೇಮಠ ಉಪಸ್ಥಿತರಿದ್ದರು.

### ಕಣವಿ ಹೊಸೂರಿನಲ್ಲಿ ಮೃತ ಮಹಿಳೆಯ ಅಂತ್ಯಸಂಸ್ಕಾರಕ್ಕೆ ಜಾಗ ಕಲ್ಪಿಸಿದ ಅಧಿಕಾರಿಗಳು | ಶಾಶ್ವತ ವ್ಯವಸ್ಥೆಗೆ ಗ್ರಾಮಸ್ಥರ ಒತ್ತಾಯ

# ಸ್ಮಶಾನದ ಸಮಸ್ಯೆಗೆ ತಾತ್ಕಾಲಿಕ ಪರಿಹಾರ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಎರಡು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ... ಆದರೆ ಸಾರ್ವಜನಿಕ ಸ್ಮಶಾನವಿಲ್ಲ. ಗ್ರಾಮದಲ್ಲಿ ಯಾರಾದರೂ ಸಾವನ್ನಪ್ಪಿದರೆ ಅಂತ್ಯಸಂಸ್ಕಾರ ಎಲ್ಲಿ ಮಾಡಬೇಕು ಎಂಬ ಪ್ರಶ್ನೆಯೇ ಕುಟುಂಬಸ್ಥರನ್ನು ಕಾಡುತ್ತಿದೆ. ಇದೇ ಸಮಸ್ಯೆ ಬುಧವಾರ ಗದಗ ತಾಲೂಕಿನ ಕಣವಿ ಹೊಸೂರು ಗ್ರಾಮದಲ್ಲಿ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಮೃತ ಮಹಿಳೆಯ ಅಂತ್ಯಸಂಸ್ಕಾರಕ್ಕೆ ಜಾಗ ಸಿಗದ ಹಿನ್ನೆಲೆಯಲ್ಲಿ ಗ್ರಾಮಸ್ಥರು ರಸ್ತೆಯಲ್ಲೇ ಅಂತ್ಯಕ್ರಿಯೆ ನಡೆಸಲು ಮುಂದಾದ ಘಟನೆ ನಡೆದಿದೆ.



ಗ್ರಾಮದ ಬಸವಣ್ಣೆಮ್ಮ (46) ಅವರು ಅನಾರೋಗ್ಯದಿಂದ ಮೃತಪಟ್ಟಿದ್ದರು. ಅಂತ್ಯಸಂಸ್ಕಾರಕ್ಕೆ ಗ್ರಾಮದಲ್ಲಿ ಸ್ಮಶಾನವಿಲ್ಲದ ಕಾರಣ ಈವರೆಗೆ ಖಾಸಗಿ ಜಮೀನಿನಲ್ಲಿ ಅಂತ್ಯಕ್ರಿಯೆ ನಡೆಸಲಾಗುತ್ತಿತ್ತು. ಆದರೆ ಈ ಬಾರಿ ಜಮೀನು ಮಾಲೀಕರು ತಮ್ಮ ಜಮೀನಿನಲ್ಲಿ ಅಂತ್ಯಸಂಸ್ಕಾರ ನಡೆಸಲು ಅವಕಾಶ ನಿರಾಕರಿಸಿದ್ದರಿಂದ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪರಿಸ್ಥಿತಿ ವಿಕೋಪಕ್ಕೆ ತಿರುಗುತ್ತಿದ್ದಂತೆ ಗ್ರಾಮಸ್ಥರು ಗ್ರಾಮದ ಬಸ್ ನಿಲ್ದಾಣದ ಸಮೀಪವೇ ಕಟ್ಟಿಗೆ ಜೋಡಿಸಿ ಮೃತದೇಹದ ಅಂತ್ಯಸಂಸ್ಕಾರಕ್ಕೆ ಸಿದ್ಧತೆ ನಡೆಸಿದರು. ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಗ್ರಾಮಸ್ಥರು ಜಿಲ್ಲಾಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ವಿಷಯ ತಿಳಿಯುತ್ತಿದ್ದಂತೆ ಗದಗ ತಹಸೀಲ್ದಾರ್ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಸಹಾಯಕ ಆಯುಕ್ತ ಗಂಗಪ್ಪ ಹಾಗೂ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸಿದರು. ಬಳಿಕ ಜಮೀನು ಮಾಲೀಕರನ್ನು ಮನವೊಲಿಸಿ, ತಾತ್ಕಾಲಿಕವಾಗಿ ಅದೇ ಜಮೀನಿನಲ್ಲಿ ಬಸವಣ್ಣೆಮ್ಮ ಅವರ ಅಂತ್ಯಸಂಸ್ಕಾರಕ್ಕೆ ಅವಕಾಶ ಕಲ್ಪಿಸಲಾಯಿತು.

ಗ್ರಾಮಸ್ಥರು ಹಲವು ವರ್ಷಗಳಿಂದ ಗ್ರಾಮಕ್ಕೆ ಶಾಶ್ವತ ಸ್ಮಶಾನ ಜಾಗ ಮಂಜೂರು ಮಾಡುವಂತೆ ಜನಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸುತ್ತಲೇ ಬಂದಿದ್ದರೂ ಯಾವುದೇ ಕ್ರಮ ಕೈಗೊಳ್ಳದ ಕಾರಣ ಈ ಪರಿಸ್ಥಿತಿ ಎದುರಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳು ಗ್ರಾಮಕ್ಕೆ ಶಾಶ್ವತ ಸ್ಮಶಾನ ಜಾಗ ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ ಬಳಿಕ ಗ್ರಾಮಸ್ಥರು ಪ್ರತಿಭಟನೆಯನ್ನು ಹಿಂಪಡೆದರು.

### ಒಂದು ಗ್ರಾಮದ ನೋವು..!

**ಕುಡಿಯುವ ನೀರು, ರಸ್ತೆ, ವಿದ್ಯುತ್‌ನಂತೆ ಸ್ಮಶಾನವೂ ಒಂದು ಮೂಲಭೂತ ಸೌಲಭ್ಯ. ಆದರೆ ಕಣವಿ ಹೊಸೂರಿನಲ್ಲಿ ಮೃತಪಟ್ಟವರಿಗೂ ಕೊನೆಯ ವಿದಾಯ ಹೇಳಲು ನಿಗದಿತ ಜಾಗವಿಲ್ಲ. ಬಸವಣ್ಣೆಮ್ಮ ಅವರ ಅಂತ್ಯಸಂಸ್ಕಾರ ಘಟನೆ ಗ್ರಾಮಸ್ಥರ ಹಲವು ವರ್ಷಗಳ ನೋವನ್ನು ಮತ್ತೆ ಮರುಕಳಿಸಿದೆ.**

### ವಿದ್ಯಾರ್ಥಿಗಳಿಗೆ ಆರೋಗ್ಯ ಜಾಗೃತಿ | 14 ವರ್ಷದ ಬಾಲಕಿಯರಿಗೆ ಎಚ್‌ಪಿವಿ ಲಸಿಕೆ

## ವಸತಿ ಶಾಲೆಯಲ್ಲಿ ಆರೋಗ್ಯ ತಪಾಸಣೆ ಲಸಿಕಾ ಅಭಿಯಾನ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಒಡೆಯರ ಮಲ್ಲಾಪುರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ (ಆರ್‌ಕೆಎಸ್‌ಕೆ) ಹಾಗೂ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ (ಆರ್‌ಬಿಎಸ್‌ಕೆ) ಅಡಿಯಲ್ಲಿ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ, ಆರೋಗ್ಯ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಆರ್‌ಬಿಎಸ್‌ಕೆ ವೈದ್ಯಾಧಿಕಾರಿ ಡಾ. ಮಂಜುನಾಥ ಮರಿಗೌಡ್ರ ಅವರು ಹದಿಹರೆಯದ ವಿದ್ಯಾರ್ಥಿಗಳಿಗೆ ದೈಹಿಕ ಹಾಗೂ ಮಾನಸಿಕ ಆರೋಗ್ಯ, ವೈಯಕ್ತಿಕ ಸ್ವಚ್ಛತೆ, ಪೌಷ್ಟಿಕ ಆಹಾರ ಮತ್ತು ಜೀವನ ಕೌಶಲ್ಯಗಳ ಕುರಿತು ಮಾಹಿತಿ ನೀಡಿದರು. ಬಳಿಕ ವಿದ್ಯಾರ್ಥಿಗಳ ಸಮಗ್ರ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಸಲಹೆ ಹಾಗೂ ಮಾರ್ಗದರ್ಶನ ನೀಡಿದರು. ಈ ವೇಳೆ ಮಾದಕ ದ್ರವ್ಯ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲಾಯಿತು. ಗರ್ಭಕಂಠ (ಸರ್ವಿಕಲ್) ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ 14 ವರ್ಷ ವಯಸ್ಸಿನ ವಿದ್ಯಾರ್ಥಿನಿಯರಿಗೆ ಎಚ್‌ಪಿವಿ ಲಸಿಕೆ ನೀಡಲಾಯಿತು.

ಆರ್‌ಕೆಎಸ್‌ಕೆ ಆಪ್ತ ಸಮಾಲೋಚಕ ಫಕ್ಕೀರೇಶ ಜಂತ್ಲಿ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ರೇಣುಕಾ ಡೊಂಬರ ಹಾಗೂ ಸಮುದಾಯ ಆರೋಗ್ಯ ಅಧಿಕಾರಿ ಬಸವಣ್ಣೆಮ್ಮ ನಾಗಣ್ಣವರ ಆರೋಗ್ಯ ಸೇವೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ನಗರಾಜ ಕಳಸಾಪುರ, ವಾರ್ಡನ್ ಎಸ್.ಎನ್. ತಳ್ಳಳ್ಳಿ, ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಸರ್ಕಾರಿ ಶಾಲೆಗಳ ಅಳಿವು ತಡೆಯಲು ವಿಶೇಷ ಯೋಜನೆ ರೂಪಿಸಿ: ಸಭಾಪತಿ ಬಸವರಾಜ ಹೊರಟ್ಟಿ

## ಕನ್ನಡ ಶಾಲೆ ಉಳಿದರೆ ಮಾತ್ರ ಕನ್ನಡ ಭಾಷೆ ಉಳಿಯುತ್ತದೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಲಕ್ಷಾಂತರ ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಶಿಕ್ಷಣದ ಬೆಳಕು ನೀಡಿದ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳ ಅಸ್ತಿತ್ವ ಇಂದು ಅಪಾಯದಲ್ಲಿದ್ದು, ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸಿದರೆ ಮಾತ್ರ ಕನ್ನಡ ಭಾಷೆಯನ್ನು ಉಳಿಸಲು ಸಾಧ್ಯ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಅವ್ವ ಸೇವಾ ಟ್ರಸ್ಟ್ ವತಿಯಿಂದ ಸಾರ್ಥಕ ಸೇವೆ ಸಲ್ಲಿಸಿದ ಶಿಕ್ಷಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಣವು ಮಕ್ಕಳ ಭವಿಷ್ಯ ರೂಪಿಸುವ ಅತ್ಯಂತ ಪ್ರಮುಖ ಸಾಧನವಾಗಿದೆ. ಬಡ ಹಾಗೂ ಮಧ್ಯಮ ವರ್ಗದ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವ ಸರ್ಕಾರಿ ಕನ್ನಡ ಶಾಲೆಗಳು ಒಂದೊಂದಾಗಿ ಮುಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಒಂದು ಕಡೆ ಸರ್ಕಾರ ಕನ್ನಡ ಭಾಷೆ ಉಳಿಸುವ ಬಗ್ಗೆ ಮಾತನಾಡುತ್ತಿದ್ದರೆ, ಮತ್ತೊಂದು ಕಡೆ ಕನ್ನಡದ ಬೇರುಗಳಾದ ಶಾಲೆಗಳೇ ಮುಚ್ಚುತ್ತಿರುವುದು ಕಳವಳಕಾರಿ ಸಂಗತಿ ಎಂದು ಹೇಳಿದರು.

ಆಂಗ್ಲ ಮಾಧ್ಯಮದ ವ್ಯಾಮೋಹದಿಂದ ಪಾಲಕರು ಕನ್ನಡ ಶಾಲೆಗಳಿಂದ ದೂರವಾಗುತ್ತಿದ್ದಾರೆ. ಈ ಪರಿಸ್ಥಿತಿ ಬದಲಾಗಬೇಕಾದರೆ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ, ಅಗತ್ಯ ಮೂಲಸೌಕರ್ಯ ಹಾಗೂ ಆಧುನಿಕ ಕಲಿಕಾ ವ್ಯವಸ್ಥೆ ಕಲ್ಪಿಸಬೇಕು. ಪ್ರಾಥಮಿಕ ಹಂತದಿಂದಲೇ ಸ್ಪರ್ಧಾತ್ಮಕ ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ಪಾಲಕರಲ್ಲಿ ವಿಶ್ವಾಸ ಮೂಡಿಸಬೇಕು ಎಂದು ಸಲಹೆ ನೀಡಿದರು.

ಶಿಕ್ಷಕರಿಗೆ ಬೋಧನೆ ಹೊರತುಪಡಿಸಿ ಅನಗತ್ಯ ಆಡಳಿತಾತ್ಮಕ ಹಾಗೂ ಇತರ ಜವಾಬ್ದಾರಿಗಳನ್ನು ನೀಡಬಾರದು. ಶಿಕ್ಷಕರು ಒತ್ತಡಮುಕ್ತವಾಗಿ ಪಾಠ ಮಾಡುವ ವಾತಾವರಣ ನಿರ್ಮಿಸಿದರೆ ಮಾತ್ರ ಶಿಕ್ಷಣದ ಗುಣಮಟ್ಟ ಹೆಚ್ಚಲು ಸಾಧ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ, ಡಾ. ಬಸವರಾಜ ಧಾರವಾಡ, ಎಸ್.ಎಸ್. ಪಟ್ಟಣಶೆಟ್ಟಿ, ಐ.ಬಿ. ಬೆನಕಪ್ಪ, ವಿ.ವಿ. ನಡುವಿನಮನಿ, ಶಂಕರ್ ಹಡಗಲಿ, ವಿದ್ಯಾವತಿ ಗಡಗಿ, ಜಯಲಕ್ಷ್ಮಿ ಅಣ್ಣಿಗೇರಿ, ಎಸ್.ಎಂ. ಅಗಡಿ, ಸುನೀಲ ವರ್ಣೇಕರ, ಮಾಂತೇಶ ಚಿತ್ತರಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜಾಥಾ, ಜಾಗೃತಿ ಕಾರ್ಯಕ್ರಮ

## ಆರೋಗ್ಯಕರ ಕುಟುಂಬವೇ ಆರೋಗ್ಯವಂತ ಸಮಾಜದ ಅಡಿಪಾಯ




**ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ಜನಸಂಖ್ಯಾ ದಿನಾಚರಣೆ2026 ಅಂಗವಾಗಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಂಯುಕ್ತ ಆಶ್ರಯದಲ್ಲಿ ನಗರದ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಜಾಥಾ ಹಾಗೂ ಜನಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ವರ್ಷದ ವಿಶ್ವ ಜನಸಂಖ್ಯಾ ದಿನದ ಘೋಷವಾಕ್ಯವೂ ಆರೋಗ್ಯಕರ ಗರ್ಭಧಾರಣೆ ಮತ್ತು ಮಕ್ಕಳ ನಡುವಿನ ಆರೋಗ್ಯಕರ ಅಂತರದ ಮಹತ್ವವನ್ನು ಸಾರುತ್ತದೆ. ಬಾಲ್ಯವಿವಾಹ ತಡೆಗಟ್ಟುವುದು, ಹೆಣ್ಣು ಮಕ್ಕಳಿಗೆ 18 ವರ್ಷ ಹಾಗೂ ಗಂಡು ಮಕ್ಕಳಿಗೆ 21 ವರ್ಷ ತುಂಬಿದ ಬಳಿಕವೇ ವಿವಾಹವಾಗುವಂತೆ ಅರಿವು ಮೂಡಿಸುವ ಅಗತ್ಯವಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿ, ಜನಸಂಖ್ಯಾ ಸ್ಫೋಟದಿಂದ ನಿರುದ್ಯೋಗ, ಆಹಾರ ಕೊರತೆ, ಶಿಕ್ಷಣ ಸೇರಿದಂತೆ ಹಲವು ಸಮಸ್ಯೆಗಳು ಎದುರಾಗುತ್ತಿದ್ದು, ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತಿದೆ ಎಂದರು. ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಭಾರ ಪ್ರಾಚಾರ್ಯ ಮಹೇಶ ಜಕ್ಕಣವರ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಭಾರ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಹೆಚ್.ಎಲ್. ಗಿರಡ್ಡಿ, ಪ್ರಭಾರ ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ, ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು, ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಎಸ್.ಡಿ. ಬೆನ್ನೂರ ಉಪನ್ಯಾಸ ನೀಡಿದರು. ಸಹದೇವಪ್ಪ ಹನಕನಹಳ್ಳಿ ಸ್ವಾಗತಿಸಿದರು. ರಾಜೇಂದ್ರ ಗಡಾದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಹೊಂಬಳ ಸರ್ಕಾರಿ ಶಾಲೆಯಲ್ಲಿ ಎಲ್‌ಕೆಜಿ, ಯುಕೆಜಿ ತರಗತಿಗಳಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಹೊಂಬಳದ ಸರ್ಕಾರಿ ಹಿರಿಯ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳಿಗೆ ಚಾಲನೆ ನೀಡಲಾಯಿತು.

ಎಸ್‌ಡಿಎಂಸಿ ಉಪಾಧ್ಯಕ್ಷೆ ಸಂಗೀತಾ ಉದಯಕುಮಾರ ಕಬ್ಬಿಣ ಕಾರ್ಯಕ್ರಮ ಉದ್ಘಾಟಿಸಿ, ಚಿಣ್ಣರಿಗೆ ಶುಭ ಹಾರೈಸಿದರು. ಬಳಿಕ ಎಲ್‌ಕೆಜಿ ಹಾಗೂ ಯುಕೆಜಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಸದಸ್ಯರಾದ ಶಿಲ್ಪಾ ಮಲ್ಲಿಕಾರ್ಜುನ ಮನ್ನೂರು, ಶ್ರೀಮತಿ ಪತ್ತಾರ, ಶಿರಾಜಸಾಬ ಕಲೇಭಾಯಿ, ಮುಖ್ಯೋಪಾಧ್ಯಾಯ ಶಿದ್ಧಪ್ಪ ಕುರಿ, ಸಹ ಶಿಕ್ಷಕ ಕೆ.ಎನ್. ಬೇಂದ್ರೆ, ಶಾಲೆಯ ಶಿಕ್ಷಕಿಯರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




**ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಅವರ 146ನೇ ಜನ್ಮದಿನಾಚರಣೆ ಅಂಗವಾಗಿ ನಗರದ ಆಲೂರ ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ವಿಶೇಷ ಉಪನ್ಯಾಸ ಹಾಗೂ ಕರ್ನಾಟಕ ಏಕೀಕರಣ ಹೋರಾಟಗಾರರ ವ್ಯಕ್ತಿಚಿತ್ರ ಮಾಲೆ ಪುಸ್ತಕಗಳ ಬಿಡುಗಡೆ ಕಾರ್ಯಕ್ರಮ ನಡೆಯಿತು.**

### ಗದಗ ಲೀಡರ್ಸ್ ಕಾಂಕ್ಲೇವ್‌ನಲ್ಲಿ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಝಿ ಘೋಷಣೆ

# 2028ರ ಚುನಾವಣೆಗೆ ಎಸ್‌ಡಿಪಿಐ ಸಜ್ಜು

**ಪ್ರಜಾಪ್ರಭುತ್ವ, ಸಂವಿಧಾನ, ಸಾಮಾಜಿಕ ನ್ಯಾಯ ಮತ್ತು ಸಹೋದರತ್ವದ ಮೌಲ್ಯಗಳನ್ನು ಬಲಪಡಿಸುವ ಸಮರ್ಥ ನಾಯಕತ್ವವನ್ನು ಬೆಳೆಸುವುದೇ ಎಸ್‌ಡಿಪಿಐಯ ಪ್ರಮುಖ ಗುರಿಯಾಗಿದೆ.**
**- ಎಂ.ಕೆ. ಫೈಝಿ,** ರಾಷ್ಟ್ರೀಯ ಅಧ್ಯಕ್ಷ, ಎಸ್‌ಡಿಪಿಐ

**ವಿಜಯಸಾಕ್ಷಿ ಸುದ್ದಿ, ಗದಗ**

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ವತಿಯಿಂದ ಗದಗ ನಗರದಲ್ಲಿ ಆಯೋಜಿಸಿದ್ದ ಟಲೀಡರ್ಸ್ ಕಾಂಕ್ಲೇವ್‌ಟ ಕಾರ್ಯಕ್ರಮದಲ್ಲಿ ಪಕ್ಷದ ರಾಷ್ಟ್ರೀಯ ಹಾಗೂ ರಾಜ್ಯ ನಾಯಕರು ಭಾಗವಹಿಸಿ, ಸಂಘಟನೆ ಬಲವರ್ಧನೆ, ಮುಂಬರುವ ಚುನಾವಣಾ ಸಿದ್ಧತೆ ಹಾಗೂ ಪಕ್ಷದ ಕಾರ್ಯತಂತ್ರಗಳ ಕುರಿತು ಚರ್ಚೆ ನಡೆಸಿದರು.

ಮುಳಗುಂದ ನಾಕಾ ವೃತ್ತದಲ್ಲಿ ಪಕ್ಷದ ರಾಷ್ಟ್ರೀಯ ಹಾಗೂ ರಾಜ್ಯ ನಾಯಕರಿಗೆ ಜಿಲ್ಲಾ ಘಟಕದ ವತಿಯಿಂದ ಭವ್ಯ ಸ್ವಾಗತ ಕೋರಲಾಯಿತು. ಬಳಿಕ ಮೆರವಣಿಗೆಯ ಮೂಲಕ ಕನಕ ಭವನ ಫಂಕ್ಷನ್ ಹಾಲ್‌ಗೆ ಆಗಮಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಎಸ್‌ಡಿಪಿಐ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಝಿ ಮಾತನಾಡಿ, ದೇಶದಲ್ಲಿ ಪ್ರಜಾಪ್ರಭುತ್ವ, ಸಂವಿಧಾನ, ಸಾಮಾಜಿಕ ನ್ಯಾಯ ಹಾಗೂ ಸಹೋದರತ್ವದ ಮೌಲ್ಯಗಳನ್ನು ಬಲಪಡಿಸುವ ಸಮರ್ಥ ನಾಯಕತ್ವವನ್ನು ಬೆಳೆಸುವುದು ಪಕ್ಷದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.



ಪಕ್ಷವು ದೇಶದ 15 ರಾಜ್ಯಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ದಲಿತರು, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆಗಾಗಿ ನಿರಂತರವಾಗಿ ಧ್ವನಿ ಎತ್ತುತ್ತಿದೆ ಎಂದು ತಿಳಿಸಿದರು.

ಎಸ್‌ಡಿಪಿಐ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಮಾತನಾಡಿ, ಮುಂಬರುವ ಜಿಲ್ಲಾ ಪಂಚಾಯಿತಿ, ಗ್ರಾಮ ಪಂಚಾಯಿತಿ, ನಗರಸಭೆ, ಪುರಸಭೆ ಹಾಗೂ 2028ರ ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಸಕ್ರಿಯವಾಗಿ ಸ್ಪರ್ಧಿಸಲಿದ್ದು, ರಾಜ್ಯದ 50 ವಿಧಾನಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು. ಗದಗ ಜಿಲ್ಲೆಯಲ್ಲಿಯೂ ಅರ್ಹ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಪತ್ರಕರ್ತರು ಕೇಳಿದ ಎಸ್‌ಡಿಪಿಐ ಬಿಜೆಪಿಯ ಬಿ-ಟೀಮ್ ಎಂಬ ಆರೋಪ ಕುರಿತ ಪ್ರಶ್ನೆಗೆ ಉತ್ತರಿಸಿದ ಅಬ್ದುಲ್ ಮಜೀದ್, ತಮ್ಮ ಪಕ್ಷ ಯಾರನ್ನಾದರೂ ಗೆಲ್ಲಿಸಲು ಅಥವಾ ಸೋಲಿಸಲು ಚುನಾವಣೆ ಎದುರಿಸುವುದಿಲ್ಲ. ಜನಪರ ಆಡಳಿತಕ್ಕಾಗಿ ಮಾತ್ರ ಚುನಾವಣೆಯಲ್ಲಿ ಸ್ಪರ್ಧಿಸುತ್ತದೆ ಎಂದು ಸ್ಪಷ್ಟಪಡಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಉಪಾಧ್ಯಕ್ಷ ಮೊಹಮ್ಮದ್ ಶಾಫಿ, ರಾಷ್ಟ್ರೀಯ ಕಾರ್ಯದರ್ಶಿ ಮೊಯಿದ್ದೀನ್, ರಾಜ್ಯ ಪ್ರಧಾನ ಕಾರ್ಯದರ್ಶಿ ಅಫ್ಸರ್ ಕೊಡ್ಲಿಪೇಟೆ, ರಾಜ್ಯ ಕಾರ್ಯದರ್ಶಿ ಅಫ್ಸರ್ ಕೆ.ಆರ್. ನಗರ ಹಾಗೂ ಗದಗ ಜಿಲ್ಲಾ ಅಧ್ಯಕ್ಷ ಬಿಲಾಲ್ ಗೋಕಾವಿ, ಪಕ್ಷದ ಮುಖಂಡರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka